# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 296
Volume - 01 Issue - 296

ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269
Title- Code: KARKAN 28269

ಚಿತ್ರದುರ್ಗ
Chitradurga

ದಿನಾಂಕ: 17–06–2024 ಸೋಮವಾರ
Date: 17-06-2024 Monday

ಪುಟ: 4
Page: 4

ಬೆಲೆ : ರೂ.2–00
Price: Rs. 2-00



**ಒಳಪುಟದ ಸುದ್ದಿಗಳು**

ಬೆಳೆ ಕಟಾವು ನಿರ್ಲಕ್ಷ್ಯ ತೋರಿದ ಅಧಿಕಾರಿಗಳ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ 2

ಗ್ರಾ.ಪಂ.ಕಾರ್ಯದರ್ಶಿಗಳ ಹೆಗಲಿಗೆ ಜನನ–ಮರಣ ನೋಂದಣಿ ಹೊಣೆ: ಎಡಿಸಿ 3

ಪಹಣಿಗೆ ಆಧಾರ್ ಜೋಡಣೆ: ರಾಜ್ಯದಲ್ಲಿ ದಾವಣಗೆರೆ ಜಿಲ್ಲೆಗೆ ಮೂರನೇ ಸ್ಥಾನ 4



ಸುದ್ದಿ, ಜಾಹಿರಾತಿಗೆ
9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಮೈತ್ರಿ ಮುಂದುವರೆಯುತ್ತೆ, ಇದೊಂದು ಶಾಶ್ವತ ಮೈತ್ರಿಯಾಗಲಿದೆ: ಕಾರಜೋಳ

» **ಹೊಸದುರ್ಗ**

ರಾಜ್ಯದಲ್ಲಿ ಬಿಜೆಪಿ ಹಾಗೂ ಜೆಡಿಎಸ್ ನಂತಹ ಎರಡು ದೈತ್ಯ ಶಕ್ತಿಗಳು ಒಂದಾಗಿ ಕಾರ್ಯ ನಿರ್ವಹಿಸಿದ್ದರಿಂದ ಗೆಲುವು ಸಾಧ್ಯವಾಯಿತು. ಜಿಲ್ಲೆಯ ಜನತೆ ನನ್ನನ್ನು ಮಗನಾಗಿ ಸ್ವೀಕರಿಸಿ, ಆರ್ಶೀವದಿಸಿದ್ದಾರೆ. ಅವರ ಪ್ರೀತಿಗೆ ದ್ರೋಹ ಬಗೆಯದಾಗೆ ಕಾರ್ಯ ನಿರ್ವಹಿಸುವೆ ಜೆಡಿಎಸ್ ಜೊತೆಗಿನ ಮೈತ್ರಿ ಮುಂದುವರೆಯುತ್ತೆ, ಇದೊಂದು ಶಾಶ್ವತ ಮೈತ್ರಿಯಾಗಲಿದೆ ಎಂದು ಸಂಸದ ಗೋವಿಂದ್ ಎಂ ಕಾರಜೋಳ ವಿಶ್ವಾಸ ವ್ಯಕ್ತಪಡಿಸಿದರು.

ಪಟ್ಟಣದ ಸಿದ್ಧರಾಮೇಶ್ವರ ಸಮುದಾಯ ಭವನದಲ್ಲಿ ಭಾನುವಾರ ಆಯೋಜಿಸಿದ್ದ ಕಾರ್ಯಕರ್ತರಿಗೆ ಅಭಿನಂದನೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಇದೇ ರೀತಿ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಒಗ್ಗಟ್ಟಾಗಿ ಕೆಲಸ ಮಾಡಿ. ಇಂದಿನಿದಂಲೇ ಪಕ್ಷದ ಸಂಘಟನೆಯ ಆಗಬೇಕು. ಪ್ರತಿ ಮನೆ ಮನೆಗೂ ಭೇಟಿ ನೀಡಿ ಪಕ್ಷ ಸಂಘಟಿಸಿ ಎಂದು ಕಾರ್ಯಕರ್ತರಿಗೆ ಹುರಿದುಂಬಿಸಿದ ಅವರು ಭದ್ರಾ ಮೇಲ್ದಂಡೆ ಯೋಜನೆಯಿಂದ 2.5 ಲಕ್ಷ ಹೆ. ಭೂಮಿಗೆ ನೀರಾವರಿ ಸೌಲಭ್ಯ, 359 ಕೆರೆಗಳನ್ನು ತುಂಬಿಸಿ ಅಂತರ್ಜಲ ಹೆಚ್ಚಿಸುವುದು, ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಲಾಗುವುದು. ರಾಜ್ಯದಲ್ಲಿನ ಕೇಂದ್ರ ಮಂತ್ರಿಗಳು ನೆರವು ಪಡೆದು, ಭದ್ರಾ ಮೇಲ್ದಂಡೆ ಯೋಜನೆ ಕಾಮಗಾರಿಯನ್ನು, ನನ್ನ ಅವಧಿಯಲ್ಲೇ ಮುಗಿಸುತ್ತೇನೆ. ತಾಲ್ಲೂಕಿನ ಜನತೆಯ ನೀರಿನ ಬವಣೆ ನೀಗಿಸುತ್ತೇನೆ

ದಾವಣಗೆರೆ, ಬೆಂಗಳೂರು, ತುಮಕೂರು ರೈಲ್ವೆ ಮಾರ್ಗದ ಕಾಮಗಾರಿ, ಭದ್ರಾ ಮೇಲ್ದಂಡೆ ನೀರಾವರಿಗೆ ₹5300 ಕೋಟಿ ಬಜೆಟ್ ನಲ್ಲಿ, ಮೀಸಲಿದ್ದು ಅದನ್ನು ಬಿಡುಗಡೆ ಮಾಡಿಸಲು ಪ್ರಾಮಾಣಿಕ ಪ್ರಯತ್ನ ಮಾಡುವೆ ಎಂದರು.



ಜಿಡಿಎಸ್ ಜಿಲ್ಲಾಧ್ಯಕ್ಷ ಜಯಣ್ಣ ಮಾತನಾಡಿ ಬಿಜೆಪಿ ಜೆಡಿಎಸ್ ಮೈತ್ರಿ ಆಗದಿದ್ದಲ್ಲಿ, ಗೆಲುವು ಸಾಧಿಸುವುದು ಕಷ್ಟವಾಗುತ್ತಿತ್ತು. ಕಾಂಗ್ರೆಸ್ ಸರ್ಕಾರ, ಶಾಸಕರಿದ್ದರೂ ಸಹ ಗೋವಿಂದ ಕಾರಜೋಳ ಗೆಲುವು ಸಾಧಿಸಿದ್ದಾರೆ. ಇದಕ್ಕೆ ಕಾರಣ ಕಾರ್ಯಕರ್ತರ ಪರಿಶ್ರಮ. ಜಿ.ಪಂ ಹಾಗೂ ತಾ.ಪಂಗಳಲ್ಲಿ ಹೀಗೆ ಒಗ್ಗಟ್ಟಾಗಿ ಸಾಗಬೇಕು. ಜಿಲ್ಲೆಗೆ ಭದ್ರಾ ಮೇಲ್ದಂಡೆ ಯೋಜನೆ, ರೈಲ್ವೆ ಕಾಮಗಾರಿ ಹಾಗೂ ಒಂದು ಕಾರ್ಖಾನೆ ನೀಡಬೇಕು ಎಂದು ನೂತನ ಸಂಸದರಿಗೆ ಒತ್ತಾಯಿಸಿದರು.'

ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಕೆ.ಎಸ್. ಕಲ್ಮಠ್, ರೈತ ಮೋರ್ಚಾ ಅಧ್ಯಕ್ಷ ಬುರುಡೇಕಟ್ಟೆ ರಾಜೇಶ್, ಜಿಲ್ಲಾಧ್ಯಕ್ಷ ಎ. ಮುರುಳಿ, ತಾಲ್ಲೂಕು ಅಧ್ಯಕ್ಷ ಗೂಳಿಹಟ್ಟಿ ಜಗದೀಶ್, ಖನಿಜ ನಿಗಮ ಮಂಡಳಿಯ ಮಾಜಿ ಅಧ್ಯಕ್ಷ ಎಸ್. ಲಿಂಗಮೂರ್ತಿ, ತಾಲೂಕು ಜೆಡಿಎಸ್ ಅಧ್ಯಕ್ಷ ಗಣೇಶ್ ಮೂರ್ತಿ, ಬಿಜೆಪಿ ಮುಖಂಡರುಗಳಾದ, ಸದ್ಗುರು ಪ್ರದೀಪ್, ಕೋಡಿಹಳ್ಳಿ ತಮ್ಮಣ್ಣ, ಮಾವಿನಕಟ್ಟೆ ಗುರುಸ್ವಾಮಿ, ದೊಡ್ಡಘಟ್ಟ ಲಕ್ಷ್ಮಣ್, ಬೋರ್‌ವೆಲ್‌ರಂಗೇಶ್, ಈ.ನಂದೀಶ್, ಎಂ.ಶ್ರೀನಿವಾಸ್, ಹೆಬ್ಬಳ್ಳಿ ಮಲ್ಲಿಕಾರ್ಜುನ, ಕೊಂಡಾಪುರ ಮಂಜಣ್ಣ, ಕೋಡಿಹಳ್ಳಿತಮ್ಮಣ್ಣ, ಶ್ರೀಮತಿ ಮೀನಾಕ್ಷಿನಂದೀಶ್ ಸೇರಿದಂತೆ ಪುರಸಭೆ ಸದಸ್ಯರು, ಬಿಜೆಪಿ ಹಾಗೂ ಜೆಡಿಎಸ್ ಕಾರ್ಯಕರ್ತರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಜಿ.ಪಂ ಕೆಡಿಪಿ ಸಭೆ: ಜೂನ್ 24ಕ್ಕೆ ಮುಂದೂಡಿಕೆ

» **ಚಿತ್ರದುರ್ಗ**

ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅವರ ಅಧ್ಯಕ್ಷತೆಯಲ್ಲಿ ಜೂನ್ 19ರಂದು ಕರೆಯಲಾಗಿದ್ದ ಜಿಲ್ಲಾ ಪಂಚಾಯಿತಿ ಕೆ.ಡಿ.ಪಿ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯನ್ನು ಜೂನ್ 24ರಂದು ಬೆಳಿಗ್ಗೆ 11 ಗಂಟೆಗೆ ಮುಂದೂಡಲಾಗಿದೆ.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜರುಗುವ ಸಭೆಗೆ 2023–24ನೇ ಸಾಲಿನ ಮಾರ್ಚ್ ಅಂತ್ಯದವರೆಗಿನ ಪ್ರಗತಿ ವರದಿಯೊಂದಿಗೆ ಜಿಲ್ಲಾ ಮಟ್ಟ ಅಧಿಕಾರಿಗಳು ಹಾಜರಾಗಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ತಿಳಿಸಿದ್ದಾರೆ.


### ಕಲಾವಿದರಿಗೆ ಗುರುತಿನ ಚೀಟಿ: ಅರ್ಜಿ ಆಹ್ವಾನ

» **ಚಿತ್ರದುರ್ಗ**

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ವಿವಿಧ ಕಲಾ ಪ್ರಕಾರಗಳ ಕಲಾವಿದರಿಗೆ ಕಲಾವಿದರ ಗುರುತಿನ ಚೀಟಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಈಗಾಗಲೇ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಆರಂಭವಾಗಿದ್ದು, ಜೂನ್ 28 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಕಲಾವಿದರು ತಾವು ಪ್ರದರ್ಶನ ನೀಡಿದ ದಾಖಲೆಗಳೊಂದಿಗೆ ನಿಗಧಿತ ಅರ್ಜಿ ನಮೂನೆಯಲ್ಲಿ ಇಲಾಖೆಯಲ್ಲಿ ನೊಂದಣಿ ಮಾಡಿಸಿಕೊಳ್ಳಬಹುದಾಗಿದೆ. ಅರ್ಜಿ ನಮೂನೆಗಳನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಬಳಿ ಕಚೇರಿ ಅವಧಿಯಲ್ಲಿ ಪಡೆಯಬಹುದು. ನಿಗಧಿತ ದಿನಾಂಕದ ನಂತರ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

### ವೈದ್ಯಕೀಯ ಮತ್ತು ದಂತ ವೈದ್ಯಕೀಯ ವಿದ್ಯಾಭ್ಯಾಸಕ್ಕಾಗಿ ಡಿಫೆನ್ಸ್ ಕೋಟಾದಡಿ ಅರ್ಜಿ ಆಹ್ವಾನ

» **ಚಿತ್ರದುರ್ಗ**



2024–25ನೇ ಪ್ರಸಕ್ತ ಸಾಲಿಗೆ ಮಾಜಿ ಸೈನಿಕರು, ಮಾಜಿ ಸೈನಿಕ ಅವಲಂಬಿತರ ಮಕ್ಕಳ ವೈದ್ಯಕೀಯ ಮತ್ತು ದಂತ ವೈದ್ಯಕೀಯ ವ್ಯಾಸಂಗಕ್ಕಾಗಿ ಕೇಂದ್ರ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣಸಚಿವಾಲಯದ ಸೀಟು ಹಂಚಿಕೆಯ ಆದ್ಯತೆಯ ಮೇರೆಗೆ ಕೇಂದ್ರಿಯ ಸೈನಿಕ ಮಂಡಳಿಯಿಂದ ಡಿಫೆನ್ಸ್ ಕೋಟಾದಡಿಯಲ್ಲಿ ಆದ್ಯತೆಯ ಮೇರೆಗೆ ಸೀಟು ಹಂಚಿಕೆ ಲಭ್ಯವಿದೆ. ರಾಷ್ಟ್ರೀಯ ಅರ್ಹತೆ ಮತ್ತು ಪ್ರವೇಶ ಪರೀಕ್ಷೆ (ಓಇಇಖ) ಯಲ್ಲಿ ಅರ್ಹತೆಯನ್ನು ಪಡೆದಿರುವ ವಿದ್ಯಾರ್ಥಿಗಳು ಕೇಂದ್ರೀಯ ಸೈನಿಕ ಮಂಡಳಿ ಜಾಲತಾಣದಲ್ಲಿ ಜುಲೈ 9ರೊಳಗಾಗಿ ಸೈನಿಕ ಕಲ್ಯಾಣ ಪುನರ್ವಸತಿ ಇಲಾಖೆಯಿಂದ ಪಡೆದ ದೃಢೀಕೃತ ಅರ್ಹತಾ ಪ್ರಮಾಣ ಪತ್ರದೊಂದಿಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಕೇಂದ್ರಿಯ ಸೈನಿಕ ಮಂಡಳಿಯ ಜಾಲತಾಣ ಔಓಐಖಓಇ.ಏಖಃ.ಉಔಗಿ.ಖಓ ನಲ್ಲಿ ಅಥವಾ ಕೇಂದ್ರೀಯ ಸೈನಿಕ ಮಂಡಳಿಯ ಜಾಲತಾಣ ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪ ನಿರ್ದೇಶಕರ ಕಛೇರಿ ದೂರವಾಣಿ ಸಂಖ್ಯೆ 08182–220925 ಗೆ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ರೇಣುಕಸ್ವಾಮಿ ಮನೆಗೆ ರಂಭಾಪುರಿಶ್ರೀ ಭೇಟಿ

» **ಚಿತ್ರದುರ್ಗ**

ಇತ್ತೀಚೆಗೆ ಭೀಕರವಾಗಿ ಹತ್ಯೆ ಆಗಿರುವ ರೇಣುಕಸ್ವಾಮಿ ಅವರ ಮನೆಗೆ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಭೇಟಿ ನೀಡಿ ಕುಟುಂಬದವರಿಗೆ ಸಾಂತ್ವನ ಹೇಳಿದರು.

ಈ ಸಂದರ್ಭದಲ್ಲಿ ಭೇಟಿಯಾದ ಮಾಧ್ಯಮದವರೊಂದಿಗೆ ಮಾತನಾಡಿದ ಜಗದ್ಗುರುಗಳು ಕುಟುಂಬಕ್ಕೆ ಆಧಾರ ಸ್ತಂಭವಾಗಿದ್ದ ರೇಣುಕಸ್ವಾಮಿ ಕುಟುಂಬಕ್ಕೆ ಸರ್ಕಾರ ಆರ್ಥಿಕ ನೆರವು ನೀಡಬೇಕು ಜೊತೆಗೆ ಆತನ ಪತ್ನಿಗೆ ಸರಕಾರಿ ಉದ್ಯೋಗ ನೀಡಬೇಕು. ಗೃಹ ಸಚಿವರಾಗಲಿ ಮುಖ್ಯ ಮಂತ್ರಿಗಳಾಗಲಿ ಕುಟುಂದವರನ್ನು ಭೇಟಿ ಮಾಡಿ ಧೈರ್ಯ ತುಂಬುವ ಕೆಲಸ ಮಾಡಬೇಕು ಎಂದು ಆಗ್ರಹಿಸಿದರಲ್ಲದೇ ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ಆಗಬೇಕೆಂದು ತಿಳಿಸಿದರು.



## ರೈತ ದಯಾನಂದಮೂರ್ತಿಗೆ ಬಸವಪುರಸ್ಕಾರ ಪ್ರಶಸ್ತಿ

» **ಚಳ್ಳಕೆರೆ**

ನಾಡಿನ ಯಾವುದೇ ಭಾಗದಲ್ಲಿ ಧಾರ್ಮಿಕ ಕಾರ್ಯಕ್ರಮಗಳು ನಡೆದರು



ಅಲ್ಲಿ ಜಗಜ್ಯೋತಿ ಬಸವೇಶ್ವರರ ಧಾರ್ಮಿಕ ಜಾಗೃತಿಯ ಬಗ್ಗೆ ಎಲ್ಲರೂ ಕೊಂಡಾಡುತ್ತಾರೆ.12ನೇ ಶತಮಾನದಲ್ಲಿ ಅಜ್ಞಾನ ತುಂಬಿದ ಸಂದರ್ಭದಲ್ಲಿ ಜ್ಞಾನದ ಬೆಳಕು ನೀಡಿದ ಶ್ರೇಷ್ಠಪುರುಷ ಜಗಜ್ಯೋತಿ ಬಸವೇಶ್ವರರು. ಅವರ ಹೆಸರಿನಲ್ಲಿ ಬಸವ ಪ್ರಶಸ್ತಿ ನೀಡಿ ಸನ್ಮಾನಿಸುತ್ತಿರುವುದು ಸಂತಸದ ವಿಷಯವೆಂದು ವಿಧಾನಪರಿಷತ್ ಸಭಾಪತಿ ಬಸವರಾಜಹೊರಟ್ಟಿ ತಿಳಿಸಿದರು.

ಪುಟ ↘ 3

**ಪ್ರಮುಖ ಸುದ್ದಿ**

# ಕಂಡುಂಡ ಕಥೆಗಳು, ಮೂಕ ಲಹರಿ ಕೃತಿಗಳ ಬಿಡುಗಡೆ

» **ಚಿತ್ರದುರ್ಗ**

ಆರೋಗ್ಯಪೂರ್ಣ ಸಮಾಜವನ್ನು ಕಟ್ಟುವ ಜವಾಬ್ದಾರಿ ಬರಹಗಾರನ ಮೇಲಿದೆ ಎಂದು ಖ್ಯಾತ ಸಾಹಿತಿ ಹಾಗೂ ಸಂಸ್ಕೃತಿ ಚಿಂತಕ ಮೈಸೂರಿನ ಪ್ರೊ.ಕಾಳೇಗೌಡ ನಾಗವಾರ ತಿಳಿಸಿದರು.

ಅಭಿರುಚಿ ಸಾಹಿತ್ಯಕ–ಸಾಂಸ್ಕೃತಿಕ ವೇದಿಕೆ ವತಿಯಿಂದ ತ.ರಾ.ಸು. ರಂಗಮಂದಿರದಲ್ಲಿ ಭಾನುವಾರ ನಡೆದ ಡಾ.ದೊಡ್ಡಮಲ್ಲಯ್ಯರವರ ಕಂಡುಂಡ ಕಥೆಗಳು ಹಾಗೂ ಮೂಕ ಲಹರಿ ಎರಡು ಕೃತಿಗಳ ಬಿಡುಗಡೆ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಬ್ರಾಹ್ಮಣರಿಂದ ಹಿಡಿದು ದಲಿತರವರೆಗೆ ಎಲ್ಲರಿಗೂ ಸಮಾಜವನ್ನು ಪರಿವರ್ತಿಸುವ ಹೊಣೆಗಾರಿಕೆಯಿದೆ. ಬದುಕು ಎನ್ನುವುದು ದೊಡ್ಡದು. ಡಾ.ದೊಡ್ಡಮಲ್ಲಯ್ಯ ಪಶುವೈದ್ಯರಾಗಿದ್ದುಕೊಂಡು ಸಾಹಿತ್ಯ ಅರ್ಪಣೆ ಮನೋಭಾವ ಬೆಳೆಸಿಕೊಂಡಿದ್ದಾರೆ. ಎಲ್ಲಾ ಮನಸ್ಸುಗಳು ಒಟ್ಟಿಗೆ ಬೆರೆಯಬೇಕಾದರೆ ಇಂತಹ ಕಾರ್ಯಕ್ರಮಗಳು ನಡೆಯುತ್ತಿರಬೇಕು. ಗಾಂಧಿಜಿಯ ಅನೇಕ ವಿಚಾರಗಳು ಅವೈಜ್ಞಾನಿಕವಾಗಿದೆ. ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್, ಲೋಹಿಯಾ ಇವರುಗಳ ಕಾಣಿಕೆ ಸಮಾಜಕ್ಕೆ ದೊಡ್ಡದಿದೆ.




ಬುಡಕಟ್ಟು ಜನಾಂಗದ ಜೀವನ ಪದ್ಧತಿ, ಆರೋಗ್ಯಕರ ಚಿಂತನೆ ಕುರಿತು ಕೃತಿಯಲ್ಲಿದೆ. ಪ್ರಜಾಪ್ರಭುತ್ವದಲ್ಲಿ ಸತ್ಯವಿರಬೇಕು. ಕಾಡುಗೊಲ್ಲರಲ್ಲಿ ಸಾಂಸ್ಕೃತಿಕ ಚಿಂತನೆಯಿದೆ. ವಿಚಾರ, ಮುಗ್ದತೆಯ ಪ್ರತಿರೂಪ, ಕಲ್ಮಶ ಗೊತ್ತಿಲ್ಲದ ಜನ. ಡಾ.ದೊಡ್ಡಮಲ್ಲಯ್ಯ ಪಶುವೈದ್ಯರಾಗಿದ್ದುಕೊಂಡೆ ಬರವಣಿಗೆಯಲ್ಲಿ ತೊಡಗಿಕೊಂಡಿರುವುದನ್ನು ನೋಡಿದರೆ ಅವರಲ್ಲಿ ಬರವಣಿಗೆ ಬಗ್ಗೆ ಆಸಕ್ತಿಯಿದೆ ಎನ್ನುವುದು ಗೊತ್ತಾಗುತ್ತದೆ ಎಂದರು.

ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಕೃತಿಗಳನ್ನು ಬಿಡುಗಡೆಗೊಳಿಸಿಮಾತನಾಡುತ್ತವಾಟ್ಸ್‌ಪ್, ಫೇಸ್‌ಬುಕ್‌ಗಳ ಮಾಯಾಲೋಕದಲ್ಲಿ ಓದುವವರ ಸಂಖ್ಯೆ ಕಡಿಮೆಯಾಗುತ್ತಿದೆ. ಬರವಣಿಗೆ, ಸೃಜನಶೀಲತೆ ನಿಂತಿದೆ. ಕಂಪ್ಯೂಟರ್ ಯುಗದಲ್ಲಿ ಕೈಬರವಣಿಗೆಯೇ ಕಾಣೆಯಾಗಿರುವುದರಿಂದ ಕನ್ನಡಕ್ಕೆ ಸಾಹಿತ್ಯದ ಶಕ್ತಿಯನ್ನು ತುಂಬಬೇಕಾಗಿದೆ ಎಂದು ಹೇಳಿದರು.

ಬುಡಕಟ್ಟು ಜನಾಂಗದಲ್ಲಿ ಜನಿಸಿದ ಡಾ.ದೊಡ್ಡಮಲ್ಲಯ್ಯ ಸಾಹಿತ್ಯದಲ್ಲಿ ತೊಡಗಿಸಿಕೊಂಡಿರುವುದು ಹೆಮ್ಮೆಯ ಸಂಗತಿ. ಕಂಡುಂಡ ಕಥೆಗಳು ಹಾಗೂ ಮೂಕ ಲಹರಿ ಕೃತಿಗಳಲ್ಲಿ ಗ್ರಾಮೀಣ ಭಾಷೆಯಿರುವುದರಿಂದ ಸರಳವಾಗಿ ಅರ್ಥವಾಗುವಂತಿದೆ. ಅಲ್ಲಲ್ಲಿ ಹಾಸ್ಯವೂ ಇದೆ. ಮೂಕ ಪ್ರಾಣಿಗಳ ಸೇವೆ ಮಾಡುವುದರ ಜೊತೆಗೆ ಸಾಹಿತ್ಯದ ಸೇವೆಗೂ ಬದ್ದರಾಗಿರುವ ಡಾ.ದೊಡ್ಡಮಲ್ಲಯ್ಯನವರಿಂದ ಇನ್ನಷ್ಟು ಕೃತಿಗಳು ಹೊರಬರಲಿ ಎಂದು ಹಾರೈಸಿದರು.ಪುಸ್ತಕಗಳನ್ನು ಶೋಕೇಸ್‌ಗಳಲ್ಲಿ ಇಡುವಂತಾಗಬಾರದು. ಓದಬೇಕು. ಕೃತಿ ಮತ್ತು ಸಾಹಿತ್ಯ ಪ್ರತಿಯೊಬ್ಬರ ಮನಸ್ಸಿಗೆ ಗಳೆಯನಿದ್ದಂತೆ. ಇಂದಿನ ದಿನಗಳಲ್ಲಿ ಕೃಷಿ, ಪಶುಪಾಲನೆ ವಿರಳವಾಗುತ್ತಿದೆ. ಕೃತಿಗಳನ್ನು ಓದಿದರೆ ಭಾಷೆ ಬಗ್ಗೆ ಗೌರವ ಮೂಡುತ್ತದೆ ಎಂದರು.

ವಿಶ್ರಾಂತ ಕನ್ನಡ ಪ್ರಾಧ್ಯಾಪಕ ಪ್ರೊ.ಬಿ.ಪಿ.ವೀರೇಂದ್ರಕುಮಾರ್ ಕಂಡುಂಡ ಕಥೆಗಳು ಕೃತಿ ಕುರಿತು ಮಾತನಾಡುತ್ತ ಆರೋಗ್ಯಕರ ಅಭಿರುಚಿ ಇಂದಿನ ಸಮಾಜಕ್ಕೆ ಬೇಕು. ಬರಹ, ಆಲೋಚನೆಗಳು ಸಮಾಜಕ್ಕೆ ಪೂರಕವಾಗಿರಬೇಕು. ಡಾ.ದೊಡ್ಡ ಮಲ್ಲಯ್ಯನವರು ಪಶುವೈದ್ಯರಾಗಿದ್ದುಕೊಂಡು ಅನೇಕ ಕೃತಿಗಳನ್ನು ರಚಿಸಿದ್ದಾರೆ. ಕನ್ನಡ ಬರವಣಿಗೆಯಲ್ಲಿ ತೊಡಗುವವರು ತುಂಬಾ ಕಡಿಮೆಯಿರುವ ಪ್ರಸ್ತುತ ದಿನಮಾನಗಳಲ್ಲಿ ಇಂತಹ ಕೃತಿಗಳು ಹೊರಬರುತ್ತಿರುವುದು ಹೆಮ್ಮೆಯ ಸಂಗತಿ ಎಂದು ಶ್ಲಾಘಿಸಿದರು.

ಕೃತಿಕಾರ ಡಾ.ದೊಡ್ಡಮಲ್ಲಯ್ಯ ಪ್ರಾಸ್ತಾವಿಕವಾಗಿ ಮಾತನಾಡಿ ಓದು ನನ್ನ ಬರವಣಿಗೆಯಲ್ಲಿ ಆಸೆ, ಸಡಗರ, ಸಂಭ್ರಮವನ್ನು ಹುಟ್ಟಿಸುತ್ತಿತ್ತು.

ಪುಟ ↘ 3

# ಬೆಳೆ ಕಟಾವು ನಿರ್ಲಕ್ಷ್ಯ ತೋರಿದ ಅಧಿಕಾರಿಗಳ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ: ಎಡಿಸಿ ಕುಮಾರಸ್ವಾಮಿ

» **ಚಿತ್ರದುರ್ಗ**

ಬೆಳೆ ಕಟಾವು ಪ್ರಯೋಗ ಆಧರಿಸಿ, ಬೆಳೆ ವಿಮೆ ಕಂಪನಿಗಳು ವಿಮೆ ಮೊತ್ತ ನಿರ್ಧರಿಸುತ್ತವೆ. ಸರಿಯಾದ ಸಮಯಕ್ಕೆ ಕಟಾವು ಪ್ರಯೋಗ ಮಾಡದೆ ಅಧಿಕಾರಿಗಳು ನಿರ್ಲಕ್ಷ್ಯತೋರುತ್ತಿದ್ದರ ಪರಿಣಾಮ ಜಿಲ್ಲೆಯ ರೈತರು ಸಮಸ್ಯೆ ಅನುಭವಿಸುವಂತಾಗಿದೆ. ಈ ವಿಚಾರದಲ್ಲಿ ನಿರ್ಲಕ್ಷ್ಯ ತೋರಿದ ಅಧಿಕಾರಿಗಳ ವಿರುದ್ಧ ನಿರ್ದಾಕ್ಷಿಣ್ಯವಾಗಿ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ಮಟ್ಟದ 11ನೇ ಕೃಷಿ ಗಣತಿ ಹಾಗೂ 2024-25ನೇ ಸಾಲಿನ ಜಿಲ್ಲಾ ಮಟ್ಟದ ಕೃಷಿ ಅಂಕಿ-ಅಂಶಗಳ ಮೊದಲನೇ ತ್ರೈಮಾಸಿಕ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಂದಾಯ, ಗ್ರಾಮೀಣಾಭಿವೃದ್ಧಿ, ಕೃಷಿ, ತೋಟಗಾರಿಕೆ ಇಲಾಖೆ ಅಧಿಕಾರಿಗಳು ಬೆಳಕಟಾವು ಯೋಜನೆ ಪಟ್ಟಿ ಬಿಡುಗಡೆಗೊಂಡ ಕೂಡಲೇ ನಮೂನೆ-1 ನ್ನು ಕೈಗೊಳ್ಳಲು ಇಲಾಖಾ ಮುಖ್ಯಸ್ಥರು ಅನುವು ಮಾಡಿಕೊಡಬೇಕು. ಕಟಾವು ಪ್ರಯೋಗದ ಸಿ.ಸಿ.ಇ ಮೊಬೈಲ್ ಅಪ್ಲಿಕೇಷನ್ ಡೌನ್‌ಲೋಡ್ ಮಾಡಿಕೊಂಡು ನಮೂನೆ-1 ಕೈಗೊಳ್ಳಲು ಸೂಕ್ತ ಕ್ರಮ ವಹಿಸಬೇಕು. ಬೆಳೆ ಕಟಾವು ಪ್ರಯೋಗದಲ್ಲಿ ಯಾವುದೇ ರೀತಿಯ ತಪ್ಪು ಉಂಟಾಗಬಾರದು. ಮೊಬೈಲ್ ತಂತ್ರಾಂಶದಲ್ಲಿ ಅಂಕಿ ಅಂಶಗಳು ತಪ್ಪಾಗದಂತೆ ಪ್ರಯೋಗದ ವಿವರಗಳನ್ನು ತುಂಬಬೇಕು. ಬೆಳೆ ಕಟಾವು ಪ್ರಯೋಗ ಮಾಡಲು ನಿಯೋಜಿಸಿದ ಅಧಿಕಾರಿ ಹಾಗೂ ನೌಕರರೇ ಖುದ್ದಾಗಿ ರೈತರ ಜಮೀನಿಗೆ ತೆರಳಿ ಪ್ರಯೋಗ ಕೈಗೊಳ್ಳಬೇಕು ಎಂದು ಸೂಚಿಸಿದರು.

ಬೆಳೆಕಟಾವುಪ್ರಯೋಗಮಾಡದೇ ಇದ್ದಲ್ಲಿ ಅಥವಾ ನಿರ್ಲಕ್ಷ್ಯದಿಂದ ತಪ್ಪಾಗಿ ಮಾಹಿತಿ ತುಂಬಿದರೆ ಕಟಾವು ಪ್ರಯೋಗ ಮಾಡಿದ ಅಧಿಕಾರಿಯನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು. ಛಾಯಾಚಿತ್ರವನ್ನು ಸೆರೆ ಹಿಡಿಯುವಾಗ ತೂಕದ ಯಂತ್ರವು ಹಾಗೂ ಉತ್ಪನ್ನವು ಕಾಣುವ ರೀತಿಯಲ್ಲಿ ಇರಬೇಕು. ಇಲ್ಲವಾದರೆ ಕಟಾವು ಪ್ರಯೋಗ ಅನೂರ್ಜಿತವಾಗಲಿದೆ. ಛಾಯಾಚಿತ್ರವನ್ನು ಸೆರೆ ಹಿಡಿಯುವಾಗ ತೂಕದ ಯಂತ್ರವು ಹಾಗೂ ಉತ್ಪನ್ನವು ಕಾಣುವ ರೀತಿಯಲ್ಲಿ ಇರಬೇಕು. ಬಂದಿರುವಂತಹ ತೂಕವನ್ನು ಸ್ಪಷ್ಟವಾಗಿ ಗೋಚರವಾಗುವ ರೀತಿಯಲ್ಲಿ ಫೋಟೊದಲ್ಲಿ ಸೆರೆ ಹಿಡಿಯಬೇಕು ಎಂದರು.



ಉತ್ಪನ್ನ ಹಾಗೂ ಉಪ ಉತ್ಪನ್ನಗಳನ್ನು ನಿರ್ದಿಷ್ಟ ಕಾಲಂಗಳಲ್ಲಿಯೇ ತುಂಬಬೇಕು. ತೂಕದ ಯಂತ್ರದಲ್ಲಿರುವ ಹೋಲ್ಡ್ ಬಟನ್ ಪ್ರೆಸ್ ಮಾಡಿ ತೂಕವು ಸ್ಥಿರವಾದ ನಂತರವೇ ಫೋಟೋ ತೆಗೆಯಬೇಕು. ಬೆಳೆ ಕಟಾವು ನಿಯಮಾನುಸಾರ ಮಾಡದೇ, ರೈತರಿಗೆ ಬೆಳೆ ವಿಮೆಯ ಮೊತ್ತ ದೊರಕದೇ ಹೋದಲ್ಲಿ ಅಥವಾ ಕಡಿಮೆ ಮೊತ್ತ ದೊರೆತರೆ, ಕಟಾವು ಪ್ರಯೋಗ ಕೈಗೊಂಡ ಅಧಿಕಾರಿ ವೇತನದಲ್ಲಿ ಮೊತ್ತ ಕಟಾವುಗೊಳಿಸಿ, ರೈತರಿಗೆ ನಷ್ಟ ಪರಿಹಾರ ತುಂಬಿಕೊಡಲಾಗುವುದು ಎಂದು ಎಚ್ಚರಿಸಿದರು.

ಕೃಷಿ, ತೋಟಗಾರಿಕೆ. ಕಂದಾಯ ಹಾಗೂ ಗ್ರಾಮೀಣಾಭಿವೃದ್ಧಿ ಇಲಾಖೆ ಅಧಿಕಾರಿಗಳಿಗೆ ಹಂಚಿಕೆ ಮಾಡಿದ ಬೆಳೆ ಕಟಾವುಗಳನ್ನು ಸರಿಯಾದ ಸಮಯಕ್ಕೆ ನಡೆಸಬೇಕು. ಯಾವುದೇ ಸಬೂಬು ಸಲ್ಲದು. ಬೆಳೆ ಕಟಾವು ಪ್ರಯೋಗ ಪಾರದರ್ಶಕವಾಗಿ ನಡೆಯಲು ರೈತರು, ವಿಮಾ ಕಂಪನಿಯ ಅಧಿಕಾರಿಗಳು, ಮೇಲ್ವಿಚಾರಕರಿದ್ದಲ್ಲಿ ಅವರನ್ನು ಸಹ ಬೆಳೆ ಕಟಾವು ಪ್ರಯೋಗದ ಸಂದರ್ಭದಲ್ಲಿ ಕಡ್ಡಾಯವಾಗಿ ಹಾಜರಾಗಿರುವಂತೆ ಕ್ರಮವಹಿಸಬೇಕು. ಬೆಳೆ ಸಮೀಕ್ಷೆ ದತ್ತಾಂಶದ ಶೇ.1% ಪರಿಶೀಲನೆಯನ್ನು ಆಪ್ ಬಿಡುಗಡೆಯಾದ ತಕ್ಷಣವೇ ನಿಯೋಜಿಸಿದ ಅಧಿಕಾರಿಗಳು ನಿಯೋಜಿಸಿದ ಪ್ಲಾಟ್ ಗಳಿಗೆ ಭೇಟಿ ನೀಡಿ ಪರಿಶೀಲಿಸಿ ಫೋಟೋ ತೆಗೆದು ಮೊಬೈಲ್ ಆಪ್ ನಲ್ಲಿ ಅಪ್ಲೋಡ್ ಮಾಡಲು ಸೂಚಿಸಿದರು. ಯಾವುದೇ ಕಾರಣಕ್ಕೂ ನಿಯೋಜಿಸಿದ ಪ್ಲಾಟ್ ಗಳನ್ನು ಪರಿಶೀಲನೆ ಕೈಗೊಳ್ಳದೇ ಬಾಕಿ ಉಳಿಸುವಂತಿಲ್ಲ ಎಂದರು.

ಬೆಳ ಕಟಾವಿನ ಪ್ರಯೋಗದಲ್ಲಿ ನಿರ್ಲಕ್ಷ್ಯ ತೋರಿ ಪ್ರಯೋಗಗಳ ಅನೂರ್ಜಿತಕ್ಕೆ ಕಾರಣರಾದ ಎಲ್ಲಾ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮಕೈಗೊಳ್ಳಾಗುವುದು. ಗಂಭೀರ ಪ್ರಕರಣಗಳಲ್ಲಿ ಅಮಾನತು ಮಾಡಲಾಗುವುದು. ಅನೂರ್ಜಿತಗೊಂಡ ಪ್ರಯೋಗಳ ಕುರಿತು ವಿವರವಾದ ವರದಿ ಸಲ್ಲಿಸುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಜಿಲ್ಲಾ ಅಂಕೆ ಸಂಖ್ಯೆ ಸಂಗ್ರಹಣಾಧಿಕಾರಿಗೆ ನಿರ್ದೇಶನ ನೀಡಿದರು.

2023-24ನೇ ಸಾಲಿನ ನಮೂನೆ ಎರೆಡನೇ ಹಂತದಲ್ಲಿ ಮುಂಗಾರು ಹಂಗಾಮಿನ ನಮೂನೆ-2 ರ ಹಂತದಲ್ಲಿ 1 ಹಾಗೂ ಹಿಂಗಾರು ಹಂಗಾಮಿನ ನಮೂನೆ-2ರ ಹಂತದಲ್ಲಿ 3 ಹಾಗೂ ಬೇಸಿಗೆ ಹಂಗಾಮಿನ ನಮೂನೆ-2 ರ ಹಂತದಲ್ಲಿ 1 ಬೆಳೆ ಕಟಾವು ಪ್ರಯೋಗಗಳು ಅನೂರ್ಜಿತವಾಗಿವೆ ಎಂದು ಜಿಲ್ಲಾ ಅಂಕೆ ಸಂಖ್ಯೆ ಸಂಗ್ರಹಣಾಧಿಕಾರಿ ರವಿಕುಮಾರ್. ಎನ್ ಸಭೆಯಲ್ಲಿ ತಿಳಿಸಿದರು.

ಮುಂಗಾರು ಹಂಗಾಮಿನಲ್ಲಿ ಒಟ್ಟು 31 ಪ್ರಕರಣಗಳಲ್ಲಿ ಕಟಾವು ಪ್ರಯೋಗದ ಪೋಟೋಗಳು ಹೊಂದಾಣಿಕೆಯಾಗಿಲ್ಲ. ಒಟಾರೆ 3 ಹಂಗಾಮಿನ ಕಟಾವು ಪ್ರಯೋಗಳಲ್ಲಿ 89 ಪ್ರಯೋಗಳಿಗೆ ಆಕ್ಷೇಪಣೆ ಸಲ್ಲಿಸಿ, ಸಂಬಂಧಪಟ್ಟ ಅಧಿಕಾರಿಗಳಿಗೆ ಸ್ಪಷ್ಟೀಕರಣಕ್ಕೆ ನೋಟಿಸು ನೀಡಲಾಗಿದೆ. 2023-24ನೇ ಬೇಸಿಗೆ ಹಂಗಾಮಿನಿ ಕಟಾವು ಪ್ರಯೋಗ ಬಹುತೇಕ ಪೂರ್ಣವಾಗಿದೆ. ಜಿಲ್ಲೆಗೆ ಒಟ್ಟು 546 ಬೆಳೆ ಕಟಾವು ಪ್ರಯೋಗ ಕೈಗೊಳ್ಳಲು ಯೋಜಿಸಲಾಗಿತ್ತು. ಇದರಲ್ಲಿ ಕಂದಾಯ ಇಲಾಖೆಗೆ 248, ಕೃಷಿ ಇಲಾಖೆಗೆ 66, ತೋಟಗಾರಿಕೆ ಇಲಾಖೆಗೆ 62 ಹಾಗೂ ಗ್ರಾಮೀಣಾಭಿವೃದ್ಧಿ ಇಲಾಖೆಗೆ 170 ಪ್ರಯೋಗಗಳನ್ನು ಹಂಚಿಕೆ ಮಾಡಲಾಗಿದೆ. ಈ ಎಲ್ಲಾ ಪ್ರಯೋಗಗಳ ಫಾರಂ-1 ಪೂರ್ಣಗೊಂಡಿವೆ. ಆದರೆ 546 ಪ್ರಯೋಗಳ ಪೈಕಿ 13 ಪ್ರಯೋಗಗಳ ಫಾರಂ-2 ಪೂರ್ಣಗೊಂಡಿಲ್ಲ ಎಂದು ರವಿಕುಮಾರ್.ಎನ್ ಮಾಹಿತಿ ನೀಡಿದರು.

ಸಭೆಯಲ್ಲಿ 2021-22ನೇ ಸಾಲಿನ 11ನೇ ಕೃಷಿ ಗಣತಿ ವರದಿ ಕುರಿತು ಚರ್ಚಿಸಲಾಯಿತು. 2015-16ನೇ ಸಾಲಿನ 10ನೇ ಕೃಷಿ ಗಣತಿ ಅನುಸಾರ ಜಿಲ್ಲೆಯಲ್ಲಿ 3,01,539 ವೈಯಕ್ತಿಕ ಹಿಡುವಳಿದಾರರು ಇದ್ದು, 5,48,344 ಹೆಕ್ಟೇರ್ ಸಾಗುವಳಿ ಭೂಮಿ ಇತ್ತು. ಸದ್ಯದ 11ನೇ ಕೃಷಿ ಗಣತಿಯಲ್ಲಿ 3,66,453 ವೈಯಕ್ತಿಕ ಹಿಡುವಳಿದಾರರು ಹಾಗೂ 5,75,498 ಹೆಕ್ಟೇರ್ ಸಾಗುವಳಿ ಭೂಮಿ ಇರುವುದಾಗಿ ತಿಳಿದು ಬಂದಿದೆ.

ಸಾಗುವಳಿ ಭೂಮಿ ಕ್ಷೇತ್ರದಲ್ಲಿ 27,154 ಹೆಕ್ಟೇರ್ ಅಂದರೆ ಸುಮಾರು 68 ಸಾವಿರ ಎಕರೆ ಸಾಗುವಳಿ ಭೂಮಿ ಹೆಚ್ಚಳವಾಗಿದೆ. ಇಷ್ಟು ಪ್ರಮಾಣದ ಸಾಗುವಳಿ ಭೂಮಿ ಹೆಚ್ಚಳವಾಗಲು ಸಾಧ್ಯವಿಲ್ಲ. ತಾಲ್ಲೂಕುವಾರು ತಹಶೀಲ್ದಾರಗಳಿಂದ ಮತ್ತೊಮ್ಮೆ ಮಾಹಿತಿ ಪಡೆದು ಕೃಷಿ ಗಣತಿ ವರದಿಯನ್ನು ಪ್ರತ್ಯೇಕವಾಗಿ ಜಿಲ್ಲಾ ಮಟ್ಟದ ಸಭೆಯಲ್ಲಿ ಮಂಡಿಸುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇದೇ ವೇಳೆ 11 ಕೃಷಿ ಗಣತಿಯಲ್ಲಿ ಜಿಲ್ಲೆಯ ಪರಿಶಿಷ್ಟ ಜಾತಿ ಶೇ.5 ರಷ್ಟು ಹಾಗೂ ಪರಿಶಿಷ್ಟ ಪಂಗಡದ ಶೇ.6 ರಷ್ಟು ಸಾಗುವಳಿ ಭೂಮಿ ಪ್ರಮಾಣವು 2015-16ನೇ ಗಣತಿಗಿಂತಲೂ ಕಡಿಮೆಯಾಗಿದೆ. ಜಿಲ್ಲೆಯ ಮಹಿಳಾ ಸಾಗುವಳಿ ಹಿಡುವಳಿದಾರರ ಸಂಖ್ಯೆ 2015-16ನೇ ಗಣತಿಯಲ್ಲಿ 73,405 ಇದ್ದು, ಪ್ರಸ್ತುತ ಗಣತಿಯಲ್ಲಿ 1,10,687 ಕ್ಕೆ ಏರಿಕೆಯಾಗಿದೆ. ಸಭೆಯಲ್ಲಿ ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ, ಉಪನಿರ್ದೇಶಕರುಗಳಾದ ಪ್ರಭಾಕರ್, ಶಿವಕುಮಾರ್, ಸಹಾಯಕ ಅಂಕೆ ಸಂಖ್ಯೆ ಸಂಗ್ರಹಣಾಧಿಕಾರಿಗಳಾದ ಅಶ್ವತ್ಥಾಮ, ವೀಣಾ, ಚಂದ್ರಪ್ಪ, ಸಹಾಯಕ ನಿರ್ದೇಶಕರುಗಳಾದ ಶಶಿರೇಖಾ, ಯಾಸಿನ್ ಸೇರಿದಂತೆ ಇತರೆ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ರೇಣುಕಾಸ್ವಾಮಿ ಕುಟುಂಬಕ್ಕೆ ಶಾಸಕ ವಿರೇಂದ್ರ ಸಾಂತ್ವನ

» **ಚಿತ್ರದುರ್ಗ**

ತಪ್ಪು ಯಾರೇ ಮಾಡಿದರು ರಕ್ಷಿಸುವ ಮಾತೇ ಇಲ್ಲ. ಈ ನೆಲದ ಕಾನೂನು ಎಲ್ಲರಿಗೂ ಸಮಾನವಾಗಿದೆ. ತನಿಖೆ ಉತ್ತಮವಾಗಿ ನಡೆಯುತ್ತಿದೆ. ಇದರ ಬಗ್ಗೆ ಯಾವುದೇ ಅನುಮಾನ ಬೇಡ' ಎಂದು ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ತಿಳಿಸಿದರು.

ನಟ ದರ್ಶನ್ ಮತ್ತು ಆತನ ಗ್ಯಾಂಗ್‌ನಿಂದ ಹತ್ಯೆಯಾದ ರೇಣುಕಾಸ್ವಾಮಿ ವಿಆರ್‌ಎಸ್ ಬಡಾವಣೆಯ ನಿವಾಸಕ್ಕೆ ಶನಿವಾರ ಭೇಟಿ ಮಾಡಿದ ಶಾಸಕ ವಿರೇಂದ್ರ ಪಪ್ಪಿ ತಂದೆ, ತಾಯಿ, ಪತ್ನಿಗೆ ಸಾಂತ್ವನ ಹೇಳಿದ ನಮತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರೇಣುಕಾ ಸ್ವಾಮಿಯ ಕೊಲೆಯ ಸಂಗತಿ ತಿಳಿದು ಮನಸ್ಸಿಗೆ ತುಂಬಾ ನೋವಾಯಿತು. ಕುಟುಂಬದವರಿಗೆ ಸಾಂತ್ವನ ಹೇಳಿ ವೈಯಕ್ತಿಕ ಸಹಾಯ ಮಾಡಿದ್ದೇನೆ. ಶಿವಗಣಾರಾಧನೆ ಕಾರ್ಯ ಮುಗಿದ ಕೂಡಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಕುಟುಂಬಕ್ಕೆ ಭೇಟಿ ಮಾಡಿಸುವ ಕಾರ್ಯ ಮಾಡುತ್ತೇನೆ' ಎಂದರು.

'ಸರ್ಕಾರದಿಂದ ಸೂಕ್ತ ಪರಿಹಾರ ಹಾಗೂ ರೇಣುಕಾಸ್ವಾಮಿ ಪತ್ನಿಗೆ ಸರ್ಕಾರಿ ಉದ್ಯೋಗ ಕಲ್ಪಿಸುವ ಕುರಿತು, ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಜತೆ ಚರ್ಚೆ ನಡೆಸಲಾಗುವುದು. ಇಡೀ ಕುಟುಂಬದ



ಜತೆ ನಾವಿದ್ದೇವೆ' ಎಂದು ತಿಳಿಸಿದರು.

'ಒಬ್ಬ ಮನುಷ್ಯ ಇನ್ನೊಬ್ಬ ಮನುಷ್ಯನ ಜೀವ ತೆಗೆಯುವ ಮಟ್ಟಕ್ಕೆ ಹೋಗಬಾರದು. ಇಂತಹ ಪ್ರಯತ್ನ ಯಾರು ಮಾಡಬಾರದು. ಜನನಾಯಕರು, ಅಭಿಮಾನಿ ವರ್ಗ ಹೊಂದಿರುವವರು ಆದರ್ಶರಾಗಿರಬೇಕು. ಇಂತಹ ಹೀನ ಕೆಲಸ ಮಾಡಿದಾಗ ಬೇಲಿಯೇ ಎದ್ದು ಹೊಲ ಮೇದಂತೆ ಆಗುತ್ತದೆ' ಎಂದರು.

## ರೇಣುಕಾಸ್ವಾಮಿ ಕುಟುಂಬಕ್ಕೆ ಉಮೇಶ ಕಾರಜೋಳ ಸಹಾಯ



» **ಚಿತ್ರದುರ್ಗ**

ಚಿತ್ರನಟ ದರ್ಶನ ಸಹಚರರಿಂದ ಕೊಲೆಗೀಡಾಗಿರುವ ರೇಣುಕಸ್ವಾಮಿ ಅವರ ನಿವಾಸಕ್ಕೆಬಿಜೆಪಿ ಎಸ್.ಸಿ. ಮೋರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ಉಮೇಶ ಕಾರಜೋಳ ಭೇಟಿ ನೀಡಿ ಕುಟುಂಬ ಸದಸ್ಯರಿಗೆ ಸಾಂತ್ವನ ತುಂಬಿದರು. ಜೊತೆಗೆ ವೈಯಕ್ತಿಕವಾಗಿ ಧನ ಸಹಾಯ ಮಾಡಿದರು. ಮಗನ ಅಗಲಿಕೆಯ ದುಃಖದಲ್ಲಿರುವ ತಂದೆ ತಾಯಿಗಳನ್ನು ಭೇಟಿ ಮಾಡಿ, ಈ ಘಟನೆಯಿಂದ ಎಲ್ಲರಿಗೂ ನೋವಾಗಿದೆ, ಕರುಳ ಕುಡಿ ಕಳೆದುಕೊಂಡ ದುಃಖ ಕಳೆದುಕೊಂಡವರಿಗೆ ಮಾತ್ರ ಗೊತ್ತಾಗುತ್ತದೆ, ಮೃತ ಕುಟುಂಬಕ್ಕೆ ನ್ಯಾಯ ಒದಗಿಸಲು ನಾನು ಸಹ ಬದ್ಧ, ಈ ನಿಟ್ಟಿನಲ್ಲಿ ಕುಟುಂಬದ ಧ್ವನಿಯಾಗುವೆ, ಸರ್ಕಾರ ಸಹ ನೊಂದ ಕುಟುಂಬಕ್ಕೆ ನೆರವಾಗಬೇಕು, ಅಭಯ ತುಂಬುವ ಕೆಲಸ ಮಾಡಬೇಕು ಎಂದು ಒತ್ತಾಯಿಸಿದರು.

**ಪ್ರಮುಖ ಸುದ್ದಿ**

# ಯಾರು ತಪ್ಪು ಮಾಡಿದರು ಅದು ತಪ್ಪೇ ದೊಡ್ಡ, ಚಿಕ್ಕ ವ್ಯಕ್ತಿ ಎಂಬ ಪ್ರಶ್ನೆ ಇಲ್ಲ

» **ಚಿತ್ರದುರ್ಗ**

ಯಾರು ತಪ್ಪು ಮಾಡಿದರು ಅದು ತಪ್ಪೇ ದೊಡ್ಡ ವ್ಯಕ್ತಿ, ಚಿಕ್ಕ ವ್ಯಕ್ತಿ ಎಂಬ ಪ್ರಶ್ನೆ ಇಲ್ಲ, ಕಾನೂನಿಗೆ ಯಾರು ದೊಡ್ಡವರಲ್ಲ, ನಾವು ಕುಟುಂಬಕ್ಕೆ ಸಾಂತ್ವನ ಹೇಳಲು ಬಂದಿದ್ದೇವೆ ಎಂದು ಫಿಲಂ ಚೇಂಬರ್ ಅಧ್ಯಕ್ಷ ಎನ್.ಎಂ.ಸುರೇಶ್ ಹೇಳಿದರು.

ಚಿತ್ರದುರ್ಗ ನಗರದ ರೇಣುಕಾಸ್ವಾಮಿ ಅವರ ಕುಟುಂಬಕ್ಕೆ ಧೈರ್ಯ ತುಂಬಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚಲನಚಿತ್ರ ಮಂಡಳಿಯಿಂದ ದರ್ಶನ್ ಅವರನ್ನು ಬ್ಯಾನ್ ಮಾಡುವುದು ನಮ್ಮ ಕೈಯಲ್ಲಿ ಇಲ್ಲ, ಆದರು ಕಲಾವಿದರ ಸಂಘದ ಜೊತೆ ಮಾತನಾಡಿ ತಿರ್ಮಾನ ಕೈಗೊಳ್ಳುತ್ತೇವೆ. ಚಿತ್ರರಂಗದಲ್ಲಿ ಕಾರ್ಮಿಕರು ಬಗ್ಗೆ ಚಿಂತನೆಯನ್ನು ಮಾಡಬೇಕಿದೆ. ಯಾವುದೇ ತಿರ್ಮಾನಕ್ಕೆ ಮುಂದಿನ ಎಲ್ಲಾ ಪರಿಣಾಮವನ್ನು ಯೋಚನೆ ಮಾಡುತ್ತೇವೆ. ಒಟ್ಟು ಐದು ಲಕ್ಷ ಪರಿಹಾರ ನೀಡುತ್ತೇವೆ. ಕುಟುಂಬಕ್ಕೆ ಯಾವುದಾದರೂ ಒಂದು ಶಾಶ್ವತ ಪರಿಹಾರ ಒದಗಿಸುತ್ತೇನೆ. ದರ್ಶನ್ ಅವರಿಂದ ಚಿತ್ರರಂಗದ ಚಲನಚಿತ್ರ ಮಂಡಳಿಯನ್ನು ದೂಷಣೆ ಮಾಡಬೇಡಿ. ವಾಣಿಜ್ಯ ಮಂಡಳಿ ಎಲ್ಲಾ ಸಮಯದಲ್ಲಿ ಕಷ್ಟದಲ್ಲಿ ಸ್ಪಂದಿಸುವ ಕೆಲಸ ಮಾಡಿದ್ದು ಮುಂದಿನ ದಿನಗಳಲ್ಲಿ ಉತ್ತಮ ಕೆಲಸಕ್ಕೆ



ಚಲನಚಿತ್ರ ಮಂಡಳಿ ಬೆನ್ನೆಲುಬಾಗಿರುತ್ತದೆ ಎಂದು ತಿಳಿಸಿದರು.

ಫಿಲ್ಮ್ ಚೇಂಬರ್ ಮಾಜಿ ಅಧ್ಯಕ್ಷ ಸಾರಾ ಗೋವಿಂದ್ ಮಾತನಾಡಿ ಈ ನಾಡು ಜಲ ನೆಲದ ರಕ್ಷಣೆಗಾಗಿ ಹೋರಟ ಮಾಡಿದ್ದು ನನಗೆ ಸಂತೋಷ ತಂದಿದೆ. ನಾವೆಲ್ಲರೂ ಬಂದಿರುವುದು ರೇಣುಕಾಸ್ವಾಮಿ ಕುಟುಂಬಕ್ಕೆ ಧೈರ್ಯ ತುಂಬಿ ನಿಮ್ಮ ಜೊತೆ ನಾವಿದ್ದೇವೆ ಎಂಬ ಸಂದೇಶಕ್ಕೆ ಬಂದಿದ್ದೇವೆ. ಯಾವುದೇ ಕಾರಣಕ್ಕೂ ನಾವು ರಾಜೀ ಸೂತ್ರಕ್ಕೆ ಬಂದಿದ್ದೇವೆ.

ಮನುಷ್ಯ ತಪ್ಪು ಮಾಡುವುದು ಸಹಜ ಆದರೆ ತಪ್ಪು ಈ ರೀತಿಯ ಘಟನೆ ನಡೆದಿರುವುದಕ್ಕೆ ನೇರವಾಗಿ ಚಿತ್ರರಂಗದ ಒಬ್ಬ ವ್ಯಕ್ತಿ ಮಾತ್ರ ಹೊಣೆಯಲ್ಲ, ಮುಂದಿನ ದಿನಗಳಲ್ಲಿ ರೇಣುಕಾಸ್ವಾಮಿ ಕುಟುಂಬದ ಜೊತೆ ನಾವು ಇರುತ್ತೇವೆ ಎಂಬ ಅಭಯ ನೀಡಿದ್ದೇನೆ. ರಾಜ್, ಅಂಬರೀಶ್, ವಿಷ್ಣು, ಶಂಕರ್ನಾಗ್, ಅನಂತ್ ನಾಗ್ ಅವರಂತಹ ಕಾಲ ಈಗ ಇಲ್ಲ. ನಮ್ಮ ನಾಯಕ ನಟರು ಏಕೆ ದಾರಿ ತಪ್ಪುತ್ತಿದ್ದಾರೆ ತಿಳಿಯುತ್ತಿಲ್ಲ.

ಕಾನೂನಿಗಿಂತ ಯಾರು ದೊಡ್ಡವರಲ್ಲ, ಸರ್ಕಾರ ಮತ್ತು ಪೋಲಿಸ್ ಇಲಾಖೆ ಉತ್ತಮವಾಗಿ ತನಿಖೆ ನಡೆಸುತ್ತಿದೆ. ಯಾರ ಮುಲಾಜಿಗೆ ಒಳಗಾಗುವುದು ಬೇಡ, ಯಾರೋ ಮಾಡಿದ ತಪ್ಪಿಗೆ ಎಲ್ಲಾರೂ ಹೊಣೆಯಾಗುವುದು ಸಾಧ್ಯವಿಲ್ಲ. ರೇಣುಕಾಸ್ವಾಮಿ ಅವರ ಹೆಂಡತಿ ಮತ್ತು ತಾಯಿ ಇಬ್ಬರನ್ನು ನೋಡಿ ಮನ ಕುಲುಕುತ್ತಿದೆ ಎಂದರು.

ನಿರ್ಮಾಪಕ ಸಂಘದ ಅಧ್ಯಕ್ಷ ಬಾಣಕರ್ ಮಾತನಾಡಿ ಶಾಮನೂರು ಶಿವಶಂಕರಪ್ಪ ಅವರ ಬಳಿ ಮಾತನಾಡಿದ್ದ ರೇಣುಕಾಸ್ವಾಮಿ ಅವರ ಕುಟುಂಬಕ್ಕೆ ಸರ್ಕಾರಿ ಕೆಲಸವನ್ನು ಸಹ ಕೊಡಿಸುವ ಭರವಸೆ ನೀಡಿದ್ದಾರೆ. ಈ ಪ್ರಕರಣಕ್ಕೆ ಚಿತ್ರರಂಗ ಕ್ಷಮೆ ಕೇಳುತ್ತದೆ ಎಂದರು.

ಈ ಸಂದರ್ಭದಲ್ಲಿ ಮಾಜಿ ಅಧ್ಯಕ್ಷರಾದ ಎಸ್.ಎ.ಚಿನ್ನೇಗೌಡ, ಕೆ.ವಿ.ಚಂದ್ರಶೇಖರ್, ಜಿ.ವೆಂಕಟೇಶ್, ಬಾಮ ಗಿರೀಶ್, ರಾಮಕೃಷ್ಣ, ತುಶಾಲ್, ಸಿದ್ದರಾಜು, ಸುದರ್ಶನ್, ಕೆಂಪಣ್ಣ , ಜಯಸಿಂಹ ಮುಸರಿ, ಉಮೇಶ್ ಬಾಣಕರ್, ಕುಮಾರ್, ಬಿ.ಕಾಂತರಾಜ್ ಇದ್ದರು.

**ಫಾಸ್ಟ್ ನ್ಯೂಸ್**

## ರೇಣುಕಾಸ್ವಾಮಿ ಕುಟುಂಬದವರಿಗೆ 60 ಸಾವಿರ ಚೆಕ್ ವಿತರಣೆ



» **ಚಿತ್ರದುರ್ಗ**

ಮೈಸೂರು ಜಿಲ್ಲೆಯ ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರ ಬಿಜೆಪಿ ಅಧ್ಯಕ್ಷರಾದ ಗೆಜ್ಜಗಳ್ಳಿ ಮಹೇಶ್ ಅವರು ಮೃತ ರೇಣುಕಾ ಸ್ವಾಮಿ ಅವರ ನಿವಾಸಕ್ಕೆ ಭೇಟಿ ನೀಡಿ ಅವರ ತಂದೆ-ತಾಯಿಯವರಿಗೆ ಸಾಂತ್ವನ ಹೇಳಿದ್ದಾರೆ. ಈ ಸಂದರ್ಭದಲ್ಲಿ ಮಾತನಾಡಿದ ಅವರು, ರಾಮಾಯಾಣದಲ್ಲಿ ಶ್ರವಣಕುಮಾರ ತಂದೆ ತಾಯಿಗೆ ಯಾವ ಪರಿಸ್ಥಿತಿ ಬಂದಿತ್ತು ಅದೇ ಪರಿಸ್ಥಿತಿ ಮನಸ್ಸಿಗೆ ನೋವಾಯಿತ್ತು, ಆದ ಕಾರಣ ನಮ್ಮ ಕಡೆಯಿಂದ ಆದ ಸಹಾಯ ಮಾಡುತ್ತಿದ್ದೇವೆ ಯಾರೇ ತಪ್ಪು ಮಾಡಿರಲಿ ಅವರಿಗೆ ಶಿಕ್ಷೆ ಆಗಬೇಕು ಎಂದು ತಿಳಿಸಿ ನಟರಿಂದ ಅಭಿಮಾನಿಗಳಲ್ಲ ಅಭಿಮಾನಿಗಳಿಂದ ನಟರು ಎಂದರು. ಮೃತ ರೇಣುಕಾಸ್ವಾಮಿ ಕುಟುಂಬದವರಿಗೆ 60 ಸಾವಿರ ಚೆಕ್ ನೀಡಿದರು.

## ಆಡಆತ ನ್ಯಾಯಾಧೀಕರಣ ತರಬೇತಿ: ಪರಿಶಿಷ್ಟ ಜಾತಿಯ ಕಾನೂನು ಪದವೀಧರರಿಂದ ಅರ್ಜಿ

» **ಚಿತ್ರದುರ್ಗ**

2024-25 ನೇ ಸಾಲಿಗೆ ಆಡಳಿತ ನ್ಯಾಯಾಧೀಕರಣದಲ್ಲಿತರಬೇತಿನೀಡಲುಪರಿಶಿಷ್ಟ ಜಾತಿಯ ಕಾನೂನು ಪದವೀಧರರನ್ನು ಆಯ್ಕೆ ಮಾಡಲು, ಪರಿಶಿಷ್ಟ ಜಾತಿಯ ಅರ್ಹ ಕಾನೂನು ಪದವೀಧರರಿಂದ ಅರ್ಜಿ ಆಹ್ವಾನಿಸಲಾಗಿದೆ ಆಸಕ್ತ ಅಭ್ಯರ್ಥಿಗಳು www.sw.kar.nic.in ತಂತ್ರಾಂಶದಲ್ಲಿ ಇದೇ ಜೂನ್ 18 ರಿಂದ ಅರ್ಜಿ ಸಲ್ಲಿಸಬಹುದು. ಜುಲೈ 31 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಷರತ್ತುಗಳು: ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಅರ್ಜಿ ಸಲ್ಲಿಕೆಯ ದಿನಾಂಕಕ್ಕೆ ಕಾನೂನು ಪದವಿಯನ್ನು ಪಡೆದು 2 ವರ್ಷ ಮೀರಿರಬಾರದು. ಅರ್ಜಿ ಸಲ್ಲಿಕೆಯ ಕೊನೆಯ ದಿನಾಂಕಕ್ಕೆ ಅಭ್ಯರ್ಥಿಯ ವಯಸ್ಸು 40 ವರ್ಷ ಮೀರಿರಬಾರದು. ತರಬೇತಿಯನ್ನು ಜಿಲ್ಲೆಯಲ್ಲಿಯೇ ಪಡೆದಿರಬೇಕು. ತರಬೇತಿಗೆ ಆಯ್ಕೆ ಮಾಡಲಾದ ಅಭ್ಯರ್ಥಿಗಳಿಗೆ ತರಬೇತಿ ಅವಧಿಯಲ್ಲಿ ರೂ.10,000 ಶಿಷ್ಯ ವೇತನ ನೀಡಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳು ಜಿಲ್ಲಾ ಪಬ್ಲಿಕ್ ಪ್ರಾಸಿಕ್ಯೂಟರ್, ಸರ್ಕಾರಿ ವಕೀಲರು ಅಥವಾ 20 ವರ್ಷಗಳ ಕಾಲ ಕಡಿಮೆ ಇಲ್ಲದ ವಕೀಲ ವೃತ್ತಿಯಲ್ಲಿ ಸೇವೆ ಸಲ್ಲಿಸುತ್ತಿರುವ ನ್ಯಾಯವಾದಿಗಳ ಬಳಿ ತರಬೇತಿ ಪಡೆಯುತ್ತಿದ್ದೀರಿ ಎಂದು ಲಿಖಿತ ರೂಪದಲ್ಲಿ ತಿಳಿಸಿರಬೇಕು. ತರಬೇತಿ ಅವಧಿಯು 2 ವರ್ಷವಿದ್ದು ಮಧ್ಯದಲ್ಲಿ ಬಿಡುವುದಿಲ್ಲ ಎಂದು ಅಥವಾ ಒಂದು ವೇಳೆ ಬಿಟ್ಟರೆ ತರಬೇತಿ ಅವಧಿಯಲ್ಲಿ ಪಡೆದ ಶಿಷ್ಯ ವೇತನವನ್ನು ಶೇ.10 ರಷ್ಟು ಬಡ್ಡಿಯೊಂದಿಗೆ ಸರ್ಕಾರಕ್ಕೆ ಮರುಪಾವತಿ ಮಾಡುವುದಾಗಿ ಮುಚ್ಚಳಿಕೆ ಬರೆದು ಕೊಡಬೇಕು. ಈ ನಿಯಮ ರಾಜ್ಯ ಮತ್ತು ಕೇಂದ್ರ ಸರ್ಕಾರದಲ್ಲಿ ಕೆಲಸ ಮಾಡುತ್ತಿದ್ದರೆ ಅನ್ವಯಿಸುವುದಿಲ್ಲ. ಆಯ್ಕೆ ಯಾದ ಅಭ್ಯರ್ಥಿಗಳು ಸುಳ್ಳು ಮಾಹಿತಿ ಸುಳ್ಳು ದಾಖಲೆಗಳನ್ನು ನೀಡಿ ಆಯ್ಕೆಯಾಗಿ ಶಿಷ್ಯ ವೇತನ ಪಡೆದರೆ, ಅಂತಹ ಅಭ್ಯರ್ಥಿಗಳು ತರಬೇತಿ ಅವಧಿಯಲ್ಲಿ ಪಡೆದ ಶಿಷ್ಯ ವೇತನ ಒಟ್ಟಿಗೆ 10% ರ ಬಡ್ಡಿಯೊಂದಿಗೆ ಸರ್ಕಾರಕ್ಕೆ ಹಿಂದಿರುಗಿಸಬೇಕು. ತಪ್ಪಿದರೆ ಭೂ ಕಂದಾಯ ಬಾಕಿ ವಸೂಲಿಯಂತೆ ವಸೂಲಿ ಮಾಡಲಾಗುತ್ತದೆ. ಸಂದರ್ಶನ ನಡೆಯುವ ಸ್ಥಳ ಮತ್ತು ದಿನಾಂಕವನ್ನು ಅಂಚೆಯ ಮೂಲಕ ತಿಳಿಸಲಾಗುತ್ತದೆ. ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆಯನ್ನು ಸಂಪರ್ಕಿಸಬಹುದು.

## ಸ್ವಯಂ ಉದ್ಯೋಗಕ್ಕೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

2024-25ನೇ ಸಾಲಿಗೆ ದೀನ್ ದಯಾಳ್ ಅಂತ್ಯೋದಯರಾಷ್ಟ್ರೀಯನಗರಜೀವನೋಪಾಯ ಅಭಿಯಾನ ಯೋಜನೆಯ ಉಪಘಟಕವಾದ ಸ್ವಯಂ ಉದ್ಯೋಗ ಕಾರ್ಯಕ್ರಮದಡಿ ಸ್ವಯಂ ಉದ್ಯೋಗ ಮತ್ತು ಗುಂಪು ಉದ್ಯೋಗಕ್ಕೆ ಗುರಿ ನಿಗಧಿಪಡಿಸಿ ಅರ್ಜಿ ಆಹ್ವಾನಿಸಲಾಗಿದೆ. ಜೂನ್ 30 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.

ಚಿತ್ರದುರ್ಗ ನಗರದಲ್ಲಿ ವಾಸವಿರುವ ನಿರುದ್ಯೋಗ ಮತ್ತು ಅರೆ ನಿರುದ್ಯೋಗಿಗಳಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಸ್ವಯಂ ಉದ್ಯೋಗ ಮತ್ತು ಗುಂಪು ಉದ್ಯೋಗಕ್ಕೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಫಲಾನುಭವಿಗಳು ನಗರಸಭೆಯಲ್ಲಿ ಅರ್ಜಿಗಳನ್ನು ಪಡೆದು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಡೇನ್ಮಲ್ ಯೋಜನೆಯ ವಿಷಯ ನಿರ್ವಾಹಕರನ್ನು ಸಂಪರ್ಕಿಸಬಹುದು ಎಂದು ನಗರಸಭೆ ಪೌರಾಯುಕ್ತೆ ಎಂ. ರೇಣುಕಾ ತಿಳಿಸಿದ್ದಾರೆ.

**ಫಾಸ್ಟ್ ನ್ಯೂಸ್**

## ಕಂಡುಂಡ ಕಥೆಗಳು, ಮೂಕ ಲಹರಿ ಕೃತಿಗಳ ಬಿಡುಗಡೆ

» ಮೊದಲ ಪುಟದಿಂದ

ಹಾಗಾಗಿಯೇ ನಾನು ಕೃತಿಗಳನ್ನು ಹೊರತರಲು ಪ್ರೇರಣೆಯಾಯಿತು. ಕೆಲವು ಜನ ಮೂಕ ಪ್ರಾಣಿಗಳಿಗಿಂತಲೂ ಕಡೆಯಾಗಿರುತ್ತಾರೆ. ಆದ್ದರಿಂದ ಮೂಕ ಪ್ರಾಣಿಗಳ ಸೇವೆ ಮಾಡುವುದರಲ್ಲಿ ನನಗೆ ತೃಪ್ತಿಯಿದೆ. ನಿತ್ಯ ಜೀವನ ಹಾಗೂ ಸುತ್ತಮುತ್ತಲಿನ ಪರಿಸರ ನನ್ನನ್ನು ಬರವಣಿಗೆ ಕಡೆ ಸೆಳೆಯಿತು. ಪರಿಸರದ ಅನುಭವ ಮೂಕ ಪ್ರಾಣಿಗಳ ಸೇವೆ, ಪ್ರಕೃತಿಯ ಅನೇಕ ರಹಸ್ಯ, ಸೂಕ್ಷ್ಮತೆಗಳ ಪಾಠ ನನ್ನ ತಂದೆಯಿಂದ ಕಲಿತೆ ಎಂದು ಸ್ಮರಿಸಿದರು.

ಅಭಿರುಚಿ ಸಹ ಸಂಚಾಲಕರು ಹಾಗೂ ಸಾಹಿತಿ ಸಿ.ಸೋಮಶೇಖರಯ್ಯ ಅಧ್ಯಕ್ಷತೆ ವಹಿಸಿದ್ದರು.

ಸಾಹಿತಿ ಹಾಗೂ ಪತ್ರಕರ್ತ ಮಂಜುನಾಥ ಅದ್ದೆ, ಶಿವಮೊಗ್ಗ ಕನ್ನಡ ಪಶುವೈದ್ಯ ಸಾಹಿತ್ಯ ಪರಿಷತ್ತು ಅಧ್ಯಕ್ಷ ಡಾ.ಎಸ್.ಬಿ.ರವಿಕುಮಾರ್, ಕರ್ನಾಟಕ ಪಶುವೈದ್ಯಕೀಯ ಸಂಘದ ಜಿಲ್ಲಾಧ್ಯಕ್ಷ ಡಾ.ಎಸ್. ಕಲ್ಲಪ್ಪ, ಬೆಂಗಳೂರು ಮಹಾರಾಣಿ ಕಾಲೇಜಿನ ಸಮಾಜಶಾಸ್ತ್ರ ಪ್ರಾಧ್ಯಾಪಕ ಸಿ.ಜಿ.ಲಕ್ಷ್ಮಿಪತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ವೇದಿಕೆಯಲ್ಲಿದ್ದರು. ಡಾ.ದೊಡ್ಡಮಲ್ಲಯ್ಯನವರ ಅಪಾರ ಅಭಿಮಾನಿಗಳು ಕೃತಿಗಳ ಲೋಕಾರ್ಪಣೆಯಲ್ಲಿ ಭಾಗವಹಿಸಿದ್ದರು. ಗಂಗಾಧರ್ ಮತ್ತು ತಂಡದವರು ಪ್ರಾರ್ಥಿಸಿದರು. ಡಾ.ಅಭಿನವ ಡಿ.ಎಂ. ವಂದಿಸಿದರು. ಶ್ರೀಮತಿ ಜಯಾ ಪ್ರಾಣೇಶ್ ನಿರೂಪಿಸಿದರು.

## ಸ್ವಯಂ ಉದ್ಯೋಗಕ್ಕೆ ಅರ್ಜಿ ಆಹ್ವಾನ

» ಚಿತ್ರದುರ್ಗ

2024–25ನೇ ಸಾಲಿಗೆ ದೀನ್ ದಯಾಳ್ ಅಂತ್ಯೋದಯರಾಷ್ಟ್ರೀಯನಗರಜೀವನೋಪಾಯ ಅಭಿಯಾನ ಯೋಜನೆಯ ಉಪಘಟಕವಾದ ಸ್ವಯಂ ಉದ್ಯೋಗ ಕಾರ್ಯಕ್ರಮದಡಿ ಸ್ವಯಂ ಉದ್ಯೋಗ ಮತ್ತು ಗುಂಪು ಉದ್ಯೋಗಕ್ಕೆ ಗುರಿ ನಿಗಧಿಪಡಿಸಿ ಅರ್ಜಿ ಆಹ್ವಾನಿಸಲಾಗಿದೆ. ಜೂನ್ 30 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.

ಚಿತ್ರದುರ್ಗ ನಗರದಲ್ಲಿ ವಾಸವಿರುವ ನಿರುದ್ಯೋಗ ಮತ್ತು ಅರೆ ನಿರುದ್ಯೋಗಿಗಳಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಸ್ವಯಂ ಉದ್ಯೋಗ ಮತ್ತು ಗುಂಪು ಉದ್ಯೋಗಕ್ಕೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಫಲಾನುಭವಿಗಳು ನಗರಸಭೆಯಲ್ಲಿ ಅರ್ಜಿಗಳನ್ನು ಪಡೆದು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಡೇನ್ಮಲ್ ಯೋಜನೆಯ ವಿಷಯ ನಿರ್ವಾಹಕರನ್ನು ಸಂಪರ್ಕಿಸಬಹುದು ಎಂದು ನಗರಸಭೆ ಪೌರಾಯುಕ್ತೆ ಎಂ. ರೇಣುಕಾ ತಿಳಿಸಿದ್ದಾರೆ.

## ಕಲಾವಿದರಿಗೆ ಗುರುತಿನ ಚೀಟಿ: ಅರ್ಜಿ ಆಹ್ವಾನ

» ಚಿತ್ರದುರ್ಗ

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ವಿವಿಧ ಕಲಾ ಪ್ರಕಾರಗಳ ಕಲಾವಿದರಿಗೆ ಕಲಾವಿದರ ಗುರುತಿನ ಚೀಟಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಈಗಾಗಲೇ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಆರಂಭವಾಗಿದ್ದು, ಜೂನ್ 28 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಕಲಾವಿದರು ತಾವು ಪ್ರದರ್ಶನ ನೀಡಿದ ದಾಖಲೆಗಳೊಂದಿಗೆ ನಿಗಧಿತ ಅರ್ಜಿ ನಮೂನೆಯಲ್ಲಿ ಇಲಾಖೆಯಲ್ಲಿ ನೊಂದಣಿ ಮಾಡಿಸಿಕೊಳ್ಳಬಹುದಾಗಿದೆ. ಅರ್ಜಿ ನಮೂನೆಗಳನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಬಳಿ ಕಚೇರಿ ಅವಧಿಯಲ್ಲಿ ಪಡೆಯಬಹುದು. ನಿಗಧಿತ ದಿನಾಂಕದ ನಂತರ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

## ದಯಾನಂದಮೂರ್ತಿಗೆ ಬಸವಪುರಸ್ಕಾರ ಪ್ರಶಸ್ತಿ

» ಮೊದಲ ಪುಟದಿಂದ

ಅವರು, ಬೆಂಗಳೂರಿನ ಕೊಂಡಜ್ಜಿ ಸಭಾಂಗಣದಲ್ಲಿ ಬಸವ ಜಯಂತಿ ಪ್ರಯುಕ್ತ ಬಸವ ಪರಿಷತ್ ಬೆಂಗಳೂರು ಹಮ್ಮಿಕೊಂಡಿದ್ದ ಬಸವಪುರಸ್ಕಾರ ಪ್ರಶಸ್ತಿಯನ್ನು ತಾಲ್ಲೂಕಿನ ಪ್ರಗತಿಪರ ರೈತ ಡಾ.ಆರ್.ಎ.ದಯಾನಂದಮೂರ್ತಿಯವರಿಗೆ ನೀಡಿ ಸನ್ಮಾನಿಸಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಇಸ್ರೋಸಂಸ್ಥೆ ವಿಜ್ಞಾನಿ ಬಿಎಚ್ಎಂ ದಾರಕೇಶ, ಪ್ರತಿವರ್ಷ ಈ ಕಾರ್ಯಕ್ರಮ ನಡೆಸುವ ಮೂಲಕ ಬಸವ ಪುರಸ್ಕಾರ ನೀಡುತ್ತಿರುವುದು ಸಂತಸ ತಂದಿದೆ. ವಿಶೇಷವಾಗಿ ಈ ಬಾರಿ ನಾಡಿನ ಪ್ರಗತಿಪರ ರೈತ ಆರ್.ಎ.ದಯಾನಂದಮೂರ್ತಿಗೆ ನೀಡುತ್ತಿರುವುದು ಸೂಕ್ತವಾಗಿದೆ. ದಯಾನಂದಮೂರ್ತಿ ಕಳೆದ ಹಲವಾರು ದಶಕಗಳಿಂದ ತಮ್ಮ ಕೃಷಿ ಕಾಯಕದ ಮೂಲಕವೇ ಜಿಲ್ಲೆ, ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಪ್ರಶಸ್ತಿಯನ್ನು ಪಡೆದಿದ್ದಾರೆಂದರು.

ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಪ್ರಗತಿಪರ ರೈತ ಡಾ.ಆರ್.ಎ.ದಯಾನಂದಮೂರ್ತಿ, ಇಂದು ನನ್ನ ಜೀವಮಾನದಲ್ಲೇ ಅತ್ಯುತ್ತಮ ಸಾಧನೆಮಾಡಿದ ದಿನವೆಂದು ಭಾವಿಸುವೆ. ವಿದೇಶದಲ್ಲಿ ಪ್ರಶಸ್ತಿ ಪಡೆದರೂ ನನಗೆ ತೃಪ್ತಿ ಸಿಕ್ಕಿರಲಿಲ್ಲ. ಆದರೆ, ಈ ಬಾರಿ ಬಸವ ಪ್ರಶಸ್ತಿ ಸಿಕ್ಕಿರುವುದು ಸಂತಸ ತಂದಿದೆ. ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಸಾಧನೆಯನ್ನು ಕೃಷಿ ಕ್ಷೇತ್ರದಲ್ಲಿ ಮಾಡುವ ವಿಶ್ವಾಸವಿದೆ. ಮೂರು ಬಾರಿ ಬಸವ ಪ್ರಶಸ್ತಿ ಪಡೆಯುತ್ತಿರುವುದಕ್ಕೆ ಸಂತಸ ಉಂಟಾಗಿದೆ ಎಂದರು.

# ಗ್ರಾ.ಪಂ.ಕಾರ್ಯದರ್ಶಿಗಳ ಹೆಗಲಿಗೆ ಜನನ–ಮರಣ ನೋಂದಣಿ ಹೊಣೆ: ಎಡಿಸಿ ಬಿ.ಟಿ.ಕುಮಾರಸ್ವಾಮಿ

» ಚಿತ್ರದುರ್ಗ

ಸರ್ಕಾರ ಗ್ರಾ.ಪಂ. ಕಾರ್ಯದರ್ಶಿಗಳನ್ನು ಜನನ–ಮರಣ ಉಪ ನೋಂದಣಾಧಿಕಾರಿಗಳನ್ನಾಗಿ ನೇಮಿಸಿ ಆದೇಶ ಹೊರಡಿಸಿದೆ. ಗ್ರಾ.ಪಂ. ಕಾರ್ಯದರ್ಶಿಗಳ ಹೆಗಲಿಗೆ ಜನನ–ಮರಣ ನೋಂದಣಿ ಹೊಣೆ ನೀಡಲಾಗಿದ್ದು, ಜಿಲ್ಲೆಯ ಎಲ್ಲಾ ಗ್ರಾ.ಪಂ. ಕಾರ್ಯದರ್ಶಿಗಳಿಗೆ ಈ ಕುರಿತು ತರಬೇತಿ ನೀಡಲಾಗಿದೆ. ಸಾರ್ವಜನಿಕರ ತಿಳುವಳಿಕೆಗಾಗಿ ಎಲ್ಲಾ ಗ್ರಾ.ಪಂ. ಕಾರ್ಯಾಲಯಗಳಲ್ಲಿ ಜನನ–ಮರಣ ನೋಂದಣಿ ಮಾಡಲಾಗುವುದು ಎಂದು ಫಲಕ ಅಳವಡಿಸುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶನಿವಾರ ಜರುಗಿದ ಜಿಲ್ಲಾ ಮಟ್ಟದ ನಾಗರೀಕ ಪದ್ದತಿ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಗ್ರಾ.ಪಂ. ಕಾರ್ಯದರ್ಶಿಗಳಿಗೆ ಶೀಘ್ರವೇ ಸಾಂಖ್ಯಿಕ ಇಲಾಖೆಯಿಂದ ಡಿಜಿಟಲ್ ಸಹಿ ಮಾದರಿ ಕೀ ನೀಡಲಾಗುವುದು. ಸರ್ಕಾರ ನಿರ್ಧರಿಸುವ ದಿನಾಂಕದಿಂದ ಗ್ರಾ.ಪಂ. ಕಾರ್ಯಾಲಯಗಳಲ್ಲಿ ಜನನ–ಮರಣ



ನೊಂದಣಿ ಆರಂಭವಾಗಲಿದೆ. ಜನನ ಹಾಗೂ ಮರಣದ ನೋಂದಣಿ ಅತ್ಯಂತ ಮುಖ್ಯವಾದ ಕೆಲಸವಾಗಿದೆ. ಯಾವುದೇ ಕಾರಣಕ್ಕೂ ನಿರ್ಲಕ್ಷ್ಯ ತೋರದೆ ಕಾರ್ಯ ನಿರ್ವಹಿಸಬೇಕು ಎಂದರು.ಸಾಂಸ್ಥಿಕ ಜನನ ಹಾಗೂ ಮರಣಗಳ ನೋಂದಣಿಯನ್ನು ತಪ್ಪದೇ ಮಾಡಲಾಗುತ್ತದೆ. ಆದರೆ ಗ್ರಾಮಾಂತರ ಪ್ರದೇಶದಲ್ಲಿ ಮನೆಗಳಲ್ಲಿ ಆಗುವ ಜನನ ಹಾಗೂ ಮರಣಗಳನ್ನು ಸಹ ನೊಂದಣಿ ಮಾಡುವುದು ಕಡ್ಡಾಯವಾಗಿದೆ. ಗ್ರಾಮಲೆಕ್ಕಾಧಿಕಾರಿಗಳು, ಆಶಾ ಕಾರ್ಯಕರ್ತರು ತಪ್ಪದೇ ತಮ್ಮ ವ್ಯಾಪ್ತಿಯಲ್ಲಿನ ಜನನ ಹಾಗೂ ಮರಣ ನೊಂದಣಿ ಮಾಡಲು ಸಹಕಾರ ನೀಡಬೇಕು. ಇನ್ನೂ ವೈದ್ಯಾಧಿಕಾರಿಗಳು ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಇತರೆ ಆಸ್ಪತ್ರೆಗಳಲ್ಲಿ ಉಂಟಾಗುವ ಜನನ ಹಾಗೂ ಮರಣ ನೋಂದಣಿಯನ್ನು 21 ದಿನಗಳ ಕಾಲವಧಿಯಲ್ಲಿ ಮಾಡಬೇಕು. ನಿರ್ಲಕ್ಷ್ಯ ಹಾಗೂ ತಾಂತ್ರಿಕ ಕಾರಣಗಳನ್ನು ಒಡ್ಡಿ ನೋಂದಣಿ ಮಾಡದೆ ಇರಬಾರದು ಎಂದು ಹೇಳಿದರು.ಜಿಲ್ಲೆಯಲ್ಲಿ 102 ಸರ್ಕಾರಿ ಆಸ್ಪತ್ರೆ ಹಾಗೂ 41 ಖಾಸಿಗಿ ಆಸ್ಪತ್ರೆಗಳು ಸೇರಿ 143 ನೋಂದಣಿ ಘಟಕಗಳಿವೆ. ಜನವರಿ 2024 ರಿಂದ ಮೇ 2024ರ ವರೆಗೆ ಜಿಲ್ಲೆಯಲ್ಲಿ ಒಟ್ಟು 7736 ಜನನ ಪ್ರಮಾಣ 6569 ಮರಣಗಳು ನೋಂದಣಿಯಾಗಿವೆ. ಗ್ರಾಮೀಣ ಭಾಗದಲ್ಲಿ 1167 ಜನನ, 4803 ಮರಣ, ನಗರ ಪ್ರದೇಶದಲ್ಲಿ 6569 ಜನನ 1766 ಮರಣ ನೋಂದಣಿಯಾಗಿವೆ. ಪ್ರತಿ ತಾಲ್ಲೂಕು ಹಂತದಲ್ಲಿ ತಹಶೀಲ್ದಾರ ನೇತೃತ್ವದಲ್ಲಿ ನಾಗರೀಕ ನೋಂದಣಿ ಪದ್ದತಿ ಸಮನ್ವಯ ಸಮಿತಿ ಸಭೆ ನಡೆಸಲಾಗಿದೆ ಎಂದು ಜಿಲ್ಲಾ ಅಂಕೆ ಸಂಖ್ಯೆ ಸಂಗ್ರಹಣಾಧಿಕಾರಿ ರವಿಕುಮಾರ್.ಎನ್ ಸಭೆಯಲ್ಲಿ ತಿಳಿಸಿದರು.ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜೆ.ಕುಮಾರಸ್ವಾಮಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ರೇಣುಪ್ರಸಾದ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್ ಸೇರಿದಂತೆ ನಗರ ಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಹಾಗೂ ತಾಲ್ಲೂಕು ಹಂತದ ಜನನ ಮರಣ ನೊಂದಣಾಧಿಕಾರಿಗಳು, ವೈದ್ಯಾಧಿಕಾರಿಗಳು, ಸಾಂಖ್ಯಿಕ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಜಿಲ್ಲೆಯ ಅಭಿವೃದ್ಧಿಗೆ ಪಣ: ಸಂಸದ ಕಾರಜೋಳ



» ಚಳ್ಳಕೆರೆ

ಚಿತ್ರದುರ್ಗ ಲೋಕಸಭಾ ಕ್ಷೇತ್ರಕ್ಕೆ ನೀರಾವರಿ ಸೌಲಭ್ಯವೂ ಸೇರಿದಂತೆ ಕೇಂದ್ರ ಸರ್ಕಾರದಿಂದ ವಿವಿಧ ಯೋಜನೆಗಳಲ್ಲಿ ಹಣತಂದು ಜಿಲ್ಲೆಯ ಸರ್ವತೋಮುಖ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸುವೆ ಎಂದು ನೂತನ ಸಂಸದ ಗೋವಿಂದ ಎಂ.ಕಾರಜೋಳ ತಿಳಿಸಿದರು.

ನಗರದ ಛೇಂಬರ್ ಆಫ್ ಕಾಮರ್ಸ್ ಸಭಾಂಗಣದಲ್ಲಿ ಜೆಡಿಎಸ್, ಬಿಜೆಪಿ ಮತ್ರಿಕೂಟದಿಂದ ಹಮ್ಮಿಕೊಂಡಿದ್ದ ಅಭಿನಂದನಾ ಸಮಾರಂಭದಲ್ಲಿ ಭಾಗವಹಿಸಿ ಅಭಿನಂದನೆ ಸ್ವೀಕರಿಸಿ ಮಾತನಾಡಿದರು.

ಈ ಕ್ಷೇತ್ರದಲ್ಲಿ ನಿಮ್ಮ ಗೆಲುವು ಗ್ಯಾರಂಟಿ ದೈರ್ಯದಿಂದ ಓಡಾಡಿ ಎಂದು ಮತದಾರರು ತಿಳಿಸುತ್ತಿದ್ದರು. ಇದು ನನಗೆ ಹೆಚ್ಚಿನ ಪ್ರಚಾರ ಮಾಡಲು ಸಹಾಯವಾಯಿತು ಎಂದರು. ಪ್ರಸ್ತುತ ಚುನಾವಣೆಯಲ್ಲಿ ಜೆಡಿಎಸ್,ಬಿಜೆಪಿ ಮೈತ್ರಿಯಿಂದ ಗೆಲುವು ಸುಲಭವಾಗಿದ್ದು ಮುಂದಿನ ದಿನಗಳಲ್ಲೂ ಎಲ್ಲಾ ಚುನಾವಣೆಯಲ್ಲೂ ಈ ಮೈತ್ರಿ ಶಾಶ್ವತ ಎಂದರು.ಜಿಲ್ಲಾ ಜೆಡಿಎಸ್ ಅಧ್ಯಕ್ಷ ಜಯಣ್ಣ ಮಾತನಾಡಿ, ಚಿತ್ರದುರ್ಗ ಕ್ಷೇತ್ರ ನೀರಾವರಿ ಸೌಲಭ್ಯಗಳಿಂದ ಹಿಂದುಳಿದೆ. ಗೋವಿಂದಕಾರಜೋಳ ಯಾರು ಎಂಬ ಪ್ರಶ್ನೆಗೆ ಯಾವ ಮತದಾರರು ಹೋಗದೆ ಬಿಜೆಪಿಗೆ ಮತ ನೀಡಿದ್ದಾರೆ. ಎರಡೂ ಪಕ್ಷದ ಕಾರ್ಯಕರ್ತರ ಶ್ರಮ ಗೆಲುವು ತರಲು ಸಾಧ್ಯವಾಗಿದೆ. ಕ್ಷೇತ್ರದ ಜನತೆ ನಿಮ್ಮ ಮೇಲೆ ಅಪಾರವಾದ ಗೌರವ, ವಿಶ್ವಾಸದಿಂದ ಮತ ನೀಡಿದ್ದಾರೆ. ಅದೇ ರೀತಿ ನಿಮ್ಮಿಂದ ಹೆಚ್ಚಿನ ಅಭಿವೃದ್ಧಿ ನಿರೀಕ್ಷಿಸಿದ್ದಾರೆ. ಆದ್ದರಿಂದ ಜಿಲ್ಲೆಯ ಅಭಿವೃದ್ಧಿಗೆ ಹೆಚ್ಚು ಆದ್ಯತೆ ನೀಡಿ ಎಂದರು.ಬಿಜೆಪಿ ಮುಖಂಡ ಕೆ.ಟಿ.ಕುಮಾರಸ್ವಾಮಿ ಮಾತನಾಡಿ, ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಈ ಬಾರಿ ಬಿಜೆಪಿ ಗೆಲುವು ಅಸಾಧ್ಯ. ಅಭ್ಯರ್ಥಿ ಗೋವಿಂದಕಾರಜೋಳ ಹೊಸಬರು ಆದ್ದರಿಂದ ಈ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲುವು ಗ್ಯಾರಂಟಿ ಎಂಬ ಅಭಿಪ್ರಾಯವಿತ್ತು. ಆದರೆ, ಗೋವಿಂದಕಾರಜೋಳರವರು ಚುನಾವಣಾ ಪ್ರಚಾರ ಸಂದರ್ಭದಲ್ಲಿ ತೊಡಗಿಕೊಂಡ ರೀತಿ ನೋಡಿ ಈ ಕ್ಷೇತ್ರದಲ್ಲಿ ಬಿಜೆಪಿ ಗೆಲುವು ಗ್ಯಾರಂಟಿ ಎಂಬ ಭಾವನೆ ನಮ್ಮಲ್ಲಿ ಮೂಡಿತ್ತು ಎಂದರು. ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಪಿ.ತಿಪ್ಪೇಸ್ವಾಮಿ ಮಾತನಾಡಿ, ಚಿತ್ರದುರ್ಗ ಕ್ಷೇತ್ರದಲ್ಲಿ ಜೆಡಿಎಸ್‌ನ ಯಾವ ಶಾಸಕರು ಇಲ್ಲ, ಸಂಸದ ಗೋವಿಂದಕಾರಜೋಳರವರೇ ಸದ್ಯದ ಸ್ಥಿತಿಯಲ್ಲಿನಮಗೆ ಮಾರ್ಗದರ್ಶಿ ಯಾಗಿದ್ದಾರೆ. ಆದ್ದರಿಂದ ಮತದಾರ ಮತ್ತು ಕಾರ್ಯಕರ್ತರ ಪರಿಶ್ರಮಕ್ಕೆ ಉತ್ತಮ ಬೆಲೆಸಿಗಬೇಕೆಂಬುವುದು ನನ್ನ ಅಭಿಲಾಷೆ ಎಂದರು.ಇದೇ ಸಂದರ್ಭದಲ್ಲಿ ಇಲ್ಲಿನ ಛೇಂಬರ್ ಆಫ್ ಕಾಮರ್ಸ್, ದಲ್ಲಾಲರ ಸಂಘ ಹಾಗೂ ವಿವಿಧ ಸಂಘ ಸಂಸ್ಥೆಯವರು ನೂತನ ಸಂಸದರಿಗೆ ಶಾಲು, ಪುಷ್ಪಹಾರ ಹಾಕಿ ಗೌರವಿಸಿದರು. ವೇದಿಕೆಯಲ್ಲಿ ಜಿಲ್ಲಾ ಬಿಜೆಪಿ ಅಧ್ಯಕ್ಷ ಎ.ಮುರುಳಿ, ಜಿಲ್ಲಾ ಕಾರ್ಯದರ್ಶಿ ಬಾಳೆಮಂಡಿರಾಮದಾಸ್ ಹಾಜರಿದ್ದರು.

# ರಾಜ್ಯ ಮಟ್ಟದ ವಧು-ವರರ ಕಾರ್ಯಕ್ರಮಕ್ಕೆ ಚಾಲನೆ



» ಚಿತ್ರದುರ್ಗ

ಕಾಲ ಬದಲಾದಂತೆ ವೃತ್ತಿ ಮನಸ್ಸುಗಳು ಬದಲಾಗುತ್ತಿವೆ ಎಂದು ಕರ್ನಾಟಕ ಆರ್ಯವೈಶ್ಯ ಆವೋಪ.ಗಳ ಒಕ್ಕೂಟದ ಕಾರ್ಯದರ್ಶಿ ಹೆಚ್.ಜಿ.ದತ್ತಕುಮಾರ್ ಹೇಳಿದರು.

ಆರ್ಯವೈಶ್ಯ ಸಂಘ ಚಿತ್ರದುರ್ಗ, ಆರ್ಯವೈಶ್ಯ ಅಧಿಕಾರಿಗಳ ಹಾಗೂ ವೃತ್ತಿನಿರತರ ಸಂಘದಿಂದ ವಾಸವಿ ಮಹಲ್‌ನಲ್ಲಿ ಭಾನುವಾರ ಹಮ್ಮಿಕೊಳ್ಳಲಾಗಿದ್ದ ಆರ್ಯವೈಶ್ಯ ರಾಜ್ಯ ಮಟ್ಟದ ಉಚಿತ ವಧು–ವರರ ಪರಿಚಯ ಋಣಾನುಬಂಧ ವೇದಿಕೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.ಪ್ರತಿಯೊಬ್ಬ ಪೋಷಕರಿಗೂ ಮಕ್ಕಳು ಪ್ರಾಯಕ್ಕೆ ಬಂದ ಮೇಲೆ ವಿವಾಹ ಮಾಡಿ ದಡ ಸೇರಿಸುವ ಆಸೆ ಇರುತ್ತದೆ. ಅದಕ್ಕಾಗಿ ಪ್ರಯತ್ನಗಳನ್ನು ಮಾಡುತ್ತಿರುತ್ತಾರೆ. ಯೋಗ ಕೂಡಿ ಬರಬೇಕು. ಹಾಗಾಗಿ ಆರ್ಯವೈಶ್ಯ ಜನಾಂಗಕ್ಕೆ ಅನುಕೂಲವಾಗಲಿ ಎನ್ನುವ ಉದ್ದೇಶದಿಂದ ಋಣಾನುಬಂಧ ಕಾರ್ಯಕ್ರಮ ಏರ್ಪಡಿಸಲಾಗಿದೆ. ಗಂಡಿನ ಸಂಖ್ಯೆ ಜಾಸ್ತಿಯಿದ್ದು, ಹೆಣ್ಣಿನ ಸಂಖ್ಯೆ ಕಡಿಮೆಯಿದೆ. ವ್ಯಾಪಾರಕ್ಕಾಗಿ ಬಂದ ಆರ್ಯವೈಶ್ಯ ಜನಾಂಗ ಹೆಚ್ಚಾಗಿ ಕಿರಾಣಿ ಅಂಗಡಿಗಳನ್ನು ನಡೆಸುವುದು ವಾಡಿಕೆ. ಬರಗಾಲದಂತ ಸಂದರ್ಭಗಳಲ್ಲಿ ಶೆಟ್ಟರ ಅಂಗಡಿಗಳಲ್ಲಿ ಕಿರಾಣಿ ಸಾಮಾಗ್ರಿಗಳನ್ನು ಸಾಲವಾಗಿ ಕೊಡಲಾಗುತ್ತಿತ್ತು ಎನ್ನುವುದನ್ನು ಸ್ಮರಿಸಿಕೊಂಡರು.ಆರ್ಯವೈಶ್ಯ ಸಂಘದ ಅಧ್ಯಕ್ಷ ಎಲ್.ಈ.ಶ್ರೀನಿವಾಸ್‌ಬಾಬು ಮಾತನಾಡಿ ಆರ್ಯವೈಶ್ಯ ಜನಾಂಗದಲ್ಲಿ ಹೆಣ್ಣಿನ ಸಂಖ್ಯೆ ಕಡಿಮೆಯಿದ್ದು, ಗಂಡಿನ ಸಂಖ್ಯೆ ಜಾಸ್ತಿಯಿರುವುದರಿಂದ ಕನ್ಯೆ ಸಿಗುವುದು ಕಷ್ಟಕರ ಎನ್ನುವುದನ್ನು ಗಮನದಲ್ಲಿಟ್ಟುಕೊಂಡು ಋಣಾನುಬಂಧ ಕಾರ್ಯಕ್ರಮಕ್ಕೆ ಮುಂದಾಗಿದ್ದೇವೆ.

**ಪ್ರಮುಖ ಸುದ್ದಿ**

### ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ

# ಪರಿಸರ ಸಂರಕ್ಷಣೆ ಕಾರ್ಯಕ್ಕೆ ಎಲ್ಲರೂ ಕೈಜೋಡಿಸಬೇಕು

» ಚಿತ್ರದುರ್ಗ

ವಿದ್ಯಾರ್ಥಿಗಳು ಅಧ್ಯಯನದ ಜತೆಗೆ ಪರಿಸರ ಕಾಳಜಿ ವಹಿಸಬೇಕು. ಪರಿಸರ ಸಂರಕ್ಷಣೆಗೆ ಪ್ರತಿಯೊಬ್ಬ ನಾಗರೀಕರೂ ಕೈಜೋಡಿಸಬೇಕು. ಅಂದಾಗ ಮಾತ್ರ ಭವಿಷ್ಯದಲ್ಲಿ ಪರಿಸರ ಸಮತೋಲನೆ ಕಾಪಾಡಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ನಗರದ ಜಿಲ್ಲಾ ಪಂಚಾಯಿತಿ ಕಚೇರಿ ಸಮೀಪದ ಕ್ರೀಡಾಭವನದಲ್ಲಿ ಶನಿವಾರ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಚಿತ್ರಕಲೆ ಸ್ಪರ್ಧೆ ಹಾಗೂ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪರಿಸರ ಸಂರಕ್ಷಣೆ ಕಾರ್ಯಕ್ಕೆ ವಿದ್ಯಾರ್ಥಿಗಳು ಜಾಗೃತರಾಗುವುದರ ಜತೆಗೆ ತಮ್ಮ ಕುಟುಂಬ ಹಾಗೂ ನೆರೆಹೊರೆಯವನ್ನೂ ಜಾಗೃತ ಮಾಡಬೇಕು. ಕೇವಲ ಪಠ್ಯಕ್ಕೆ ಮಾತ್ರ ಸೀಮಿತವಾಗದೇ, ಅಂಕಪಟ್ಟಿ ಹೊರತಾಗಿ ನಮ್ಮ ಜೀವನ ರೂಪಿಸಿಕೊಳ್ಳುವ ಕೌಶಲ್ಯಭರಿತ ಶಿಕ್ಷಣ ಪಡೆಯುವಂತಾಗಬೇಕು. ಮನೆಯಿಂದಲೇ ಪರಿಸರ ಜಾಗೃತಿ ಮೂಡಬೇಕು. ನಮ್ಮ ಮನೆ, ನಮ್ಮ ಮನಸ್ಸು ಸ್ವಚ್ಛವಾಗಿದ್ದರೆ ಪರಿಸರವೂ ಸ್ವಚ್ಛವಾಗಿರಲಿದೆ ಎಂದರು.

ನಾವುಗಳು ಪರಿಸರದ ಮೇಲೆ ದೌರ್ಜನ್ಯ ಮಾಡುತ್ತಾ ಹೋದಂತೆ ಮುಂದಿನ ದಿನಗಳಲ್ಲಿ ಭೂಮಂಡಲದಲ್ಲಿ ಮನುಷ್ಯ ಬದುಕುವ ಪರಿಸ್ಥಿತಿ ಕಷ್ಟಸಾಧ್ಯವಾಗಲಿದೆ.



ಆದ್ದರಿಂದ ಮಕ್ಕಳು ಪರಿಸರದ ಕಾಳಜಿ ರೂಢಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ವಲಯ ಅರಣ್ಯಾಧಿಕಾರಿ ಉಷಾರಾಣಿ ಮಾತನಾಡಿ, ಪ್ರತಿ ವರ್ಷವೂ ಜೂನ್ 5ರಂದು ವಿಶ್ವ ಪರಿಸರ ದಿನ ಆಚರಣೆ ಮಾಡಲಾಗುತ್ತದೆ. ಅರಣ್ಯ ಇಲಾಖೆ ವತಿಯಿಂದಲೂ ಗಿಡಗಳನ್ನು ಬೆಳೆಸಿ ವಿತರಣೆ ಮಾಡಲಾಗುತ್ತದೆ. ಪರಿಸರ ಉಳಿಸಲು ಹೆಚ್ಚಿನ ಸಂಖ್ಯೆಯಲ್ಲಿ ಗಿಡಮರಗಳನ್ನು ಬೆಳೆಸಬೇಕು. ಪರಿಸರ ಸಂರಕ್ಷಣೆ ನಿರಂತರ ಕೆಲಸವಾಗಬೇಕು ಎಂದು ಅಭಿಪ್ರಾಯಪಟ್ಟರು.

ನಗರಸಭೆ ಪೌರಾಯುಕ್ತೆ ಎಂ.ರೇಣುಕಾ ಮಾತನಾಡಿ, ಪ್ರತಿಯೊಬ್ಬರು ಪರಿಸರಸ್ನೇಹಿ ಜೀವನ ನಡೆಸಬೇಕು. ಪ್ರಕೃತಿ ಹಾಳು ಮಾಡಿದರೆ ಮನುಷ್ಯ ಜೀವನ ನಡೆಸಲು ಸಾಧ್ಯವಿಲ್ಲ. ಪ್ಲಾಸ್ಟಿಕ್ ಬಳಕೆ ದೂರಮಾಡಿ ಬಟ್ಟೆ ಬ್ಯಾಗ್ ಬಳಸಬೇಕು ಎಂದು ಕಿವಿಮಾತು ಹೇಳಿದರು.

ಚಿತ್ರದುರ್ಗ ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್ ಮಾತನಾಡಿ, ಪ್ರಸ್ತುತ ದಿನಗಳಲ್ಲಿ ಹವಾಮಾನ ವೈಪರಿತ್ಯಾದಿಂಗಾಗಿ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದೇವೆ. ಶಾಲಾ ಹಂತದಲ್ಲಿಯೇ ಮಕ್ಕಳಿಗೆ ಪರಿಸರ ಪ್ರಜ್ಞೆ ಹಾಗೂ ಪ್ರಾಯೋಗಿಕ ಮಾರ್ಗದರ್ಶನ ನೀಡಿ, ಪರಿಸರ ಕಾಳಜಿ ಕುರಿತು ಅರಿವು ಮೂಡಿಸಬೇಕು ಎಂದು ಹೇಳಿದರು.

ಪರಿಸರ ಅಧಿಕಾರಿ ಈ.ಪ್ರಕಾಶ್ ಪ್ರಾಸ್ತಾವಿಕವಾಗಿ ಮಾತನಾಡಿ, ಜನಸಂಖ್ಯಾ ಸ್ಫೋಟ, ನಗರೀಕರಣ, ಕೈಗಾರೀಕರಣ ಹೆಚ್ಚಳ, ಮನುಷ್ಯನ ಹಸ್ತಕ್ಷೇಪದಿಂದಾಗಿ ಜೀವ ವೈವಿಧ್ಯತೆ ಹಾಳಾಗಿದೆ. ಹಾಗಾಗಿ ನಮ್ಮ ಜೀವನಶೈಲಿಯು ಪರಿಸರ ಸ್ನೇಹಿಯಾಗಿರಬೇಕು ಎಂದು ಹೇಳಿದರು.

ಪರಿಸರ ಸಂರಕ್ಷಣೆ ಜಾಗೃತಿಗಾಗಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಬರುತ್ತಿದ್ದು, ಪರಿಸರ ದಿನಾಚರಣೆ ಅಂಗವಾಗಿ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಪ್ರಬಂಧ ಸ್ಪರ್ಧೆ, ಚಿತ್ರಕಲೆ ಸ್ಪರ್ಧೆ ಹಮ್ಮಿಕೊಂಡು ಪರಿಸರದ ಕುರಿತು ಜಾಗೃತಿ ಮೂಡಿಸಲಾಗಿದ್ದು, ಇಂದಿನ ವಿದ್ಯಾರ್ಥಿಗಳು ಪರಿಸರ ಯೋಧರಾಗಬೇಕಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಉಪ ಪರಿಸರ ಅಧಿಕಾರಿ ರಾಜೇಶ್ ಸೇರಿದಂತೆ ವಿವಿಧ ಶಾಲಾ ವಿದ್ಯಾರ್ಥಿಗಳು, ಶಿಕ್ಷಕರು ಇದ್ದರು.

ಚಿತ್ರಕಲೆ, ಪ್ರಬಂಧ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಣೆ: ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಚಿತ್ರಕಲೆ ಸ್ಪರ್ಧೆ ಹಾಗೂ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ವಿಶ್ವ ಪರಿಸರ ದಿನಾಚರಣೆ–2024ರ ಘೋಷವಾಕ್ಯ "ಭೂ ಮರು ಸ್ಥಾಪನೆ, ಮರು ಭೂಮಿಕರಣ ಹಾಗೂ ಬರ ತಡೆಯುವಿಕೆ" ನಮ್ಮ ಭೂಮಿ ನಮ್ಮ ಭವಿಷ್ಯ ಸಂಬಂಧಿಸಿದಂತೆ ಚಿತ್ರದುರ್ಗ ನಗರ ವ್ಯಾಪ್ತಿಯ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಸ್ಥಳದಲ್ಲಿಯೇ ಚಿತ್ರಕಲೆ ಮತ್ತು ಪ್ರಬಂಧ ಸ್ಪರ್ಧೆಯನ್ನು ಜೂನ್ 7ರಂದು ಏರ್ಪಡಿಸಲಾಗಿತ್ತು. ಈ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪ್ರಧಾನ ಮಾಡಲಾಯಿತು.

ಚಿತ್ರಕಲೆ ಸ್ಪರ್ಧೆ: 8ನೇ ತರಗತಿಯಲ್ಲಿ ಡಾನ್ ಬಾಸ್ಕೋ ಶಾಲೆಯ ರಿದಾ ಷರೀಫ್ (ಪ್ರಥಮ), ವಿದ್ಯಾವಿಕಾಸ ಶಾಲೆಯ ಹರ್ಷಿತ್ ಎನ್ ಬೇದ್ರೆ (ದ್ವಿತೀಯ), ಎಸ್‌ಜೆಎಂ ಸಿಬಿಎಸ್‌ಇ ಶಾಲೆಯ ಸಿ.ಅನ್ವಿತ (ತೃತೀಯ) ವಾಸವಿ ವಿದ್ಯಾ ಸಂಸ್ಥೆಯ ಎಸ್.ವಿನೀತ್ ಚಂದ್ರ (ನಾಲ್ಕನೇ) ಬಹುಮಾನ ಪಡೆದರು.

9ನೇ ತರಗತಿಯಲ್ಲಿ ವಿದ್ಯಾವಿಕಾಸ ವಿದ್ಯಾಸಂಸ್ಥೆಯ ಎಸ್.ಕೆ.ಸಂಪ್ರತಾ (ಪ್ರಥಮ), ಕೆ.ಕೆ.ನ್ಯಾಷನಲ್ ಶಾಲೆಯ ಎ.ಪವನ್ (ದ್ವಿತೀಯ) ಅನುಪಮ ಇಂಟರ್ ನ್ಯಾಷನಲ್ ಶಾಲೆಯ ಎಂ.ದೇವರಾಜ್ (ತೃತೀಯ) ಎಸ್‌ಜೆಎಂ ಆಂಗ್ಲ ಮಾಧ್ಯಮ ಶಾಲೆಯ ಟಿ.ತೃಪ್ತಿ (ನಾಲ್ಕನೇ) ಬಹುಮಾನ ಪಡೆದರು.

10ನೇ ತರಗತಿಯಲ್ಲಿ ಎಸ್‌ಜೆಎಂ ಸಿಬಿಎಸ್‌ಇ ಶಾಲೆಯ ಸಿ.ಜೀವಿತಾ (ಪ್ರಥಮ), ಸಿ.ಭಾರತಿ (ದ್ವಿತೀಯ), ವಿದ್ಯಾವಿಕಾಸ ವಿದ್ಯಾಸಂಸ್ಥೆಯ ರಾಮ್ ಚರಣ್ (ತೃತೀಯ) ಜ್ಞಾನ ಭಾರತಿ ಶಾಲೆಯ ಎಂ ಶೋಭಾ (ನಾಲ್ಕನೇ) ಬಹುಮಾನ ಪಡೆದರು.

ಪ್ರಬಂಧ ಸ್ಪರ್ಧೆ: 8ನೇ ತರಗತಿಯಲ್ಲಿ ಎಸ್‌ಜೆಎಂ ಆಂಗ್ಲ ಮಾಧ್ಯಮ ಶಾಲೆಯ ಟಿ.ಮೌಲ್ಯಶ್ರೀ (ಪ್ರಥಮ), ಶ್ರೀ ವಾಸವಿ ಕನ್ನಡ ಮಾಧ್ಯಮ ಶಾಲೆಯ ಆರ್.ಬೃಂದಾ (ದ್ವಿತಿಯ), ಕೆ.ಕೆ.ನ್ಯಾಷನಲ್ ಶಾಲೆಯ ಎಂ.ಶುಭಶ್ರೀ (ತೃತೀಯ) ವಿದ್ಯಾವಿಕಾಸ ವಿದ್ಯಾಸಂಸ್ಥೆಯ ಬಿ.ವಿ.ಬಿಂದು (ನಾಲ್ಕನೇ) ಬಹುಮಾನ ಪಡೆದರು.

## ಫಾಸ್ಟ್ ನ್ಯೂಸ್

### ಫಿಜಿಯೋಥೆರಪಿಸ್ಟ್ ನೇಮಕಾತಿಗೆ ಅರ್ಜಿ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ವತಿಯಿಂದ ನಡೆಯುವ ಗೃಹಾಧಾರಿತ ಮತ್ತು ಶಾಲಾಧಾರಿತ ಶಿಕ್ಷಣ ಪಡೆಯುತ್ತಿರುವ 93 ಮಕ್ಕಳಿಗೆ ಫಿಜಿಯೋಥೆರಪಿಸ್ಟ್ ಸೇವೆ ಪಡೆಯಲು ತಾತ್ಕಾಲಿಕ ನೇಮಕಾತಿ ಮಾಡಿಕೊಳ್ಳುವ ಸಂಬಂಧ ಅರ್ಜಿ ಆಹ್ವಾನಿಸಿದೆ. ಡಿ.ಪಿ.ಟಿ, ಬಿ.ಪಿ.ಟಿ ಅರ್ಹ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳಿಂದ ಇದೇ ಜೂನ್ 20ರೊಳಗೆ ಅರ್ಜಿಗಳನ್ನು ಚಿತ್ರದುರ್ಗ ನಗರದ ಹಳೇ ಮಾಧ್ಯಮಿಕ ಶಾಲಾ ಆವರಣ ಬಿ.ಆರ್.ಸಿ ಕಚೇರಿಗೆ ಸಲ್ಲಿಸುವಂತೆ ಸಮಗ್ರ ಶಿಕ್ಷಣ ಕರ್ನಾಟಕ ಕ್ಷೇತ್ರ ಸಮನ್ವಯಾಧಿಕಾರಿ ತಿಳಿಸಿದ್ದಾರೆ.

### ತರಬೇತಿ ಅರ್ಜಿ ಆಹ್ವಾನ

» ದಾವಣಗೆರೆ

ಆಡಳಿತ ನ್ಯಾಯಧೀಕರಣದಲ್ಲಿ ಪರಿಶಿಷ್ಟ ವರ್ಗದ ಕಾನೂನು ಪದವೀಧರರಿಗೆ ವೃತ್ತಿ ಕಾನೂನು ತರಬೇತಿ ನೀಡಲು ಕಾನೂನು ಪದವಿ ಹೊಂದಿದ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.ದಾವಣಗೆರೆ ಜಿಲ್ಲೆಗೆ 8 ಗುರಿ ನಿಗಧಿಪಡಿಸಲಾಗಿದ್ದು ಇಲಾಖೆಯ ವೆಬ್ ಸೈಟ್ www.tw.kar.nic.in ಮೂಲಕ ಜೂ.18 ರಿಂದ 31 ರವರೆಗೆ ಅರ್ಜಿ ಸಲ್ಲಿಸಿ.

### ಅತ್ತೆ–ಸೊಸೆ ಸಮಾಲೋಚನಾ ಸಭೆಯಲ್ಲಿ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ ಕರೆ

# ಚಿಕ್ಕ ಕುಟುಂಬದ ಆದರ್ಶ ಪಾಲಿಸಲು ಸಲಹೆ

» ಚಿತ್ರದುರ್ಗ

ಸುಖಕರ ಕುಟುಂಬ ನಿಮ್ಮದಾಗಲು ಅತ್ತೆ–ಸೊಸೆಯರು ಯೋಚಿಸಿ ನಿರ್ಧಾರಕ್ಕೆ ಬನ್ನಿ. ಚಿಕ್ಕ ಕುಟುಂಬದ ಆದರ್ಶಗಳನ್ನು ಪಾಲಿಸುವಂತೆ ಚಿತ್ರದುರ್ಗ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ್ ಕರೆ ನೀಡಿದರು.

ಇಲ್ಲಿನ ಬುದ್ಧನಗರದ ನಗರ ಆರೋಗ್ಯ ಕೇಂದ್ರ ವ್ಯಾಪ್ತಿಯ ರಾಜೇಂದ್ರ ನಗರದ ಅಂಗನವಾಡಿ "ಎ' ಕೇಂದ್ರದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಜನಸಂಖ್ಯೆ ಸ್ಥಿರತೆ ಕಾಪಾಡಲು ಕುಟುಂಬ ಕಲ್ಯಾಣ ಯೋಜನೆ ಯಶಸ್ವಿ ಅನುಷ್ಠಾನಕ್ಕಾಗಿ ಅತ್ತೆ ಸೊಸೆಯರ ಸಮಾಲೋಚನಾ ಸಭೆ ಉದ್ದೇಶಿಸಿ ಅವರು ಮಾತನಾಡಿದರು.



ಜೂನ್ 07 ರಿಂದ ಜುಲೈ 07 ನೇ ರವರೆಗೆ ಜನಸಂಖ್ಯೆ ಸ್ಥಿರತೆ ಮಾಸಿಕವನ್ನು ಎರಡು ಪಾಕ್ಷಿಕದಲ್ಲಿ ವಿವಿಧ ಕಾರ್ಯಕ್ರಮಗಳ ಮೂಲಕ ಸರ್ಕಾರದ ಮಾರ್ಗಸೂಚಿಯಂತೆ ನಡೆಸಲಾಗುತ್ತದೆ. ಜೂನ್ 07 ರಿಂದ ಜೂನ್ 20 ರ ತನಕ ದಂಪತಿ ಸಂಪರ್ಕ ಪಾಕ್ಷಿಕ ಇದರಲ್ಲಿ ಅರ್ಹ ದಂಪತಿಗಳ ಮನೆ ಮನೆ ಭೇಟಿ, ಆರೋಗ್ಯ ಇಲಾಖೆಯಲ್ಲಿ ದೊರೆಯುವ ಕುಟುಂಬ ಯೋಜನೆಗಳ ಪರಿಚಯ, ದಂಪತಿ ಸಂಪರ್ಕ ಸಭೆ, ತಾಯಂದಿರ ಸಭೆ, ಗುಂಪು ಸಭೆ ಮತ್ತು ಅತ್ತೆ–ಸೊಸೆಯೊಂದಿಗೆ ಸಮಾಲೋಚನಾ ಸಭೆಗಳನ್ನ ನಡೆಸಿ ಜನಸಂಖ್ಯೆ ಸ್ಥಿರತೆ ಶಿಕ್ಷಣ ನೀಡುವುದು, ಕುಟುಂಬ ಯೋಜನೆಗಳ ಅನುಷ್ಠಾನಕ್ಕೆ ಮನ ಒಲಿಸುವುದಾಗಿದೆ ಎಂದರು.

ಜೂನ್ 20 ರಿಂದ ಜುಲೈ 07 ವಿಶ್ವ ಜನಸಂಖ್ಯೆ ದಿನದವರೆಗೆ ಸೇವಾ ಪಾಕ್ಷಿಕ ಕುಟುಂಬ ಯೋಜನೆ ಸೇವೆಗಳನ್ನು ಒದಗಿಸುವುದಾಗಿರುತ್ತದೆ. ಈ ದಿನದ ಅತ್ತೆ ಸೊಸೆಯರಲ್ಲಿ ಕೇಳಿಕೊಳ್ಳುವುದೇನೆಂದರೆ ಅಂತರದ ಹೆರಿಗೆ ಅಂದರೆ ಒಂದು ಮಗುವಿಗೂ ಎರಡನೇ ಮಗುವಿಗೂ ಕನಿಷ್ಠ 5 ವರ್ಷದ ಅಂತರವನ್ನು ಕಾಪಾಡಿಕೊಳ್ಳುವುದು. ಇದಕ್ಕಾಗಿ ಆರೋಗ್ಯ ಇಲಾಖೆಯಲ್ಲಿ ವಂಕಿ ಅಳವಡಿಕೆ, ನುಂಗುವ ಮಾತ್ರೆ, ನಿರೋಧ್ ಬಳಕೆ ಡಿಂಪಾ ಚುಚ್ಚು ಮದ್ದು, ಟುಬ್ಯಕ್ಟಮಿ, ಎನ್.ಎಸ್.ವಿ.ಶಸ್ತ್ರಚಿಕಿತ್ಸೆ ಸೇವೆಗಳು ಉಚಿತವಾಗಿ ಲಭ್ಯವಿದೆ. ಇವುಗಳ ಉಪಯೋಗ ಪಡೆದುಕೊಳ್ಳಿ ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ಕುಟುಂಬ ಯೋಜನೆಯಲ್ಲಿ ಪುರುಷರ ಸಹ–ಭಾಗಿತ್ವಕ್ಕಾಗಿ ಅತ್ತೆ ಸೊಸೆಯರು ಒಮ್ಮತದ ತೀರ್ಮಾನಕ್ಕೆ ಬನ್ನಿ. ಮಕ್ಕಳನ್ನು ನವಮಾಸ ಹೊಟ್ಟೆಯಲ್ಲಿ ತುಂಬಿಕೊಂಡು, ಹೆರಿಗೆನೋವನ್ನು ಸಹಿಸಿಕೊಂಡು, ಹಾಲುಣಿಸುವ ಜವಾಬ್ದಾರಿ ಪಡೆದು ನಂತರ ಮಕ್ಕಳ ಲಸಿಕೆ ಲಲನೆ ಪಾಲನೆ ಸಂಸಾರದ ಪೂರ್ಣಹೊರೆಯನ್ನು ಮಹಿಳೆಯರೇನಿಭಾಯಿಸುವಾಗಕುಟುಂಬ ಯೋಜನೆ ಅನುಷ್ಠಾನಕ್ಕೆ ಪುರುಷರು ಏಕೆ ಭಾಗವಹಿಸಬಾರದು. ಪುರುಷರಿಗಾಗಿ ಹೊಲಿಗೆ ಇಲ್ಲದ, ನೋವೇ ಇಲ್ಲದ ಪುರುಷತ್ವಕ್ಕೆ ಯಾವುದೇ ತೊಂದರೆ ಇಲ್ಲದ ನೋ ಸ್ಕಾಲ್ ಪೆಲ್ ವ್ಯಾಸೆಕ್ಟಮಿ ಶಸ್ತ್ರಚಿಕಿತ್ಸೆ ಮಾಡಿಸಿಕೊಳ್ಳಲು ಅತ್ತೆಸೊಸೆಯರು ಮನೆಯಲ್ಲಿ ಒಟ್ಟಿಗೆ ಕುಳಿತು ತೀರ್ಮಾನ ಕೈಗೊಳ್ಳಿ ಆಗ ನಿಮ್ಮ ಕುಟುಂಬ ಸುಖಿ ಕುಟುಂಬ ವಾಗುತ್ತದೆ ಎಂದರು. ಮುಖ್ಯ ಆರೋಗ್ಯ ಮೇಲ್ವಿಚಾರಣಾಧಿಕಾರಿ ಎಮ್.ಬಿ.ಹನುಮಂತಪ್ಪ, ಹಿರಿಯ ಆರೋಗ್ಯ ಸುರಕ್ಷತಾಧಿಕಾರಿ ಕಾತ್ಯಾಣಮ್ಮ ವಿವಿಧ ಕುಟುಂಬ ಯೋಜನೆಗಳ ಪ್ರಾತ್ಯಕ್ಷಿಕೆ ನೀಡಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಆರೋಗ್ಯ ಸುರಕ್ಷತಾಧಿಕಾರಿಗಳಾದ ಉಷಾ, ಏಕಾಂತಮ್ಮ ಗೀತಾ, ಅಂಗನವಾಡಿ ಕಾರ್ಯಕರ್ತೆ ಶಶಿಕಲಾ, ಮೀನಾಕ್ಷಿ, ಆಶಾ ಕಾರ್ಯಕರ್ತೆಯರು ಅತ್ತೆ ಸೊಸೆಯರು ಭಾಗವಹಿಸಿದ್ದರು. 10 ಜನ ಅತ್ತೆ–ಸೊಸೆಯರಲ್ಲಿ 4 ಜನ ಕುಟುಂಬ ಯೋಜನೆ ಅನುಸರಿಸಲು ಮುಂದೆ ಬಂದರು.

# ಪಹಣಿಗೆ ಆಧಾರ್ ಜೋಡಣೆ: ರಾಜ್ಯದಲ್ಲಿ ದಾವಣಗೆರೆ ಜಿಲ್ಲೆಗೆ ಮೂರನೇ ಸ್ಥಾನ

### ಶೇ 80 ಕ್ಕಿಂತ ಹೆಚ್ಚು ಸಾಧನೆ ಮಾಡಿದ ಗ್ರಾಮ ಆಡಳಿತ ಅಧಿಕಾರಿಗಳಿಗೆ ಸನ್ಮಾನ

» ದಾವಣಗೆರೆ

ಕಂದಾಯ ಇಲಾಖೆ ಸಂಪೂರ್ಣ ಡಿಜಿಟಲೀಕರಣವಾಗುತ್ತಿದ್ದು ಜಮೀನಿನ ಮಾಲೀಕರ ಪಹಣಿಗೆ ಆಧಾರ್ ಜೋಡಣೆ ಮಾಡುವ ಮೂಲಕ ಸರ್ಕಾರದ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಮುಂದಾಗಿದ್ದು ದಾವಣಗೆರೆ ಜಿಲ್ಲೆಯಲ್ಲಿ ಶೇ 64.73 ರಷ್ಟು ಖಾತೆದಾರರ ಆಧಾರ್‌ನ್ನು ಪಹಣಿಗೆ ಜೋಡಿಸಿದ್ದು ಇದು ರಾಜ್ಯದಲ್ಲಿ 3 ನೇ ಸ್ಥಾನದಲ್ಲಿದೆ ಎಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು.

ಅವರು ಶನಿವಾರ ಆನಗೋಡು ಬಳಿಯ ಸೈನ್ಸ್ ಭವನದಲ್ಲಿ ನಡೆದ ಜಿಲ್ಲೆಯ ಕಂದಾಯಾಧಿಕಾರಿಗಳ ಸಭೆಯಲ್ಲಿ ಮಾತನಾಡಿದರು. 425708 ಖಾತೆದಾರರ ಆಧಾರ್ ಜೋಡಣೆ ಮಾಡಲಾಗಿದೆ. ಮರಣ, ಭೂ ಪರಿವರ್ತನೆಯಾದ 109955 ಸೇರಿ 535663 ಆಧಾರ್ ಜೋಡಣೆ ಮಾಡುವ ಮೂಲಕ ಶೇ 64.73 ರಷ್ಟು ಆಧಾರ್ ಜೋಡಣೆ ಮಾಡಲಾಗಿದೆ. ಶೇ 80 ರಷ್ಟು ಆಧಾರ್ ಜೋಡಣೆ ಮಾಡಲಾದ ಗ್ರಾಮ ಆಡಳಿತ ಅಧಿಕಾರಿಗಳಿಗೆ ಸಭೆಯಲ್ಲಿ ಸನ್ಮಾನಿಸಲಾಯಿತು.



ಕೆಲವು ಖಾತೆದಾರರ ಮೂಲ ಮಾಲಿಕರು ಮರಣ ಹೊಂದಿದ್ದು ಅವರ ಹೆಸರಿನಲ್ಲಿಯೇ ಪಹಣಿ ಚಾಲ್ತಿಯಲ್ಲಿರುತ್ತವೆ. ಮುಂದಿನ ದಿನಗಳಲ್ಲಿ ಪೌತಿ ಖಾತೆ ಆಂದೋಲನವನ್ನು ಕೈಗೊಳ್ಳುವ ಮೂಲಕ ಖಾತೆ ಬದಲಾವಣೆ ಮಾಡಿ ಪಹಣಿಗೆ ಆಧಾರ್ ಜೋಡಣೆಯ ಕೆಲಸವನ್ನು ಕೈಗೆತ್ತಿಕೊಳ್ಳಬೇಕೆಂದು ತಿಳಿಸಿದರು.

ಸರ್ಕಾರಿ ಜಾಗ ತಡೆಗೆ ಲ್ಯಾಂಡ್‌ಬೀಟ್; ಸರ್ಕಾರಿ ಜಾಗದ ಒತ್ತುವರಿ ತೆರವುಗೊಳಿಸಿ ಜಿಯೋ ಫೆನ್ಸಿಂಗ್ ಮಾಡುವ ಕೆಲಸ ಪ್ರಗತಿಯಲ್ಲಿದ್ದು ಜಿಲ್ಲೆಯಲ್ಲಿ 19408 ಸರ್ಕಾರದ ಆಸ್ತಿಗಳನ್ನು ಗುರುತಿಸಲಾಗಿದೆ. ಇದರಲ್ಲಿ ಹರಿಹರ 2599, ಜಗಳೂರು 2662, ದಾವಣಗೆರೆ 5664, ಹೊನ್ನಾಳಿ 2482, ಚನ್ನಗಿರಿ 3672, ನ್ಯಾಮತಿ 2329 ಆಸ್ತಿಗಳಿವೆ. ಇದರಲ್ಲಿ 10956 ಆಸ್ತಿಗಳನ್ನು ಗುರುತಿಸಿ ಜಿಯೋ ಫೆನ್ಸಿಂಗ್ ಮಾಡಲಾಗಿದೆ. ಉಳಿದ 8452 ಆಸ್ತಿಗಳನ್ನು ರಕ್ಷಣೆ ಮಾಡಲು ತಿಳಿಸಿದರು.

**ಕಂದಾಯ ಗ್ರಾಮ;** ಜಿಲ್ಲೆಯಲ್ಲಿ ಕಂದಾಯ ಗ್ರಾಮಗಳೆಂದು ಘೋಷಣೆ ಮಾಡಲು 81 ಪ್ರಸ್ತಾವನೆಗಳಿದ್ದು ಇವುಗಳಲ್ಲಿ ಈಗಾಗಲೇ 35 ಪ್ರಾಥಮಿಕ ಅಧಿಸೂಚನೆ ಹೊರಡಿಸಲಾಗಿದೆ. ಇನ್ನುಳಿದ ಗ್ರಾಮಗಳನ್ನು ಆದಷ್ಟು ಬೇಗನೆ ಅಧಿಸೂಚನೆ ಹೊರಡಿಸಲು ಕ್ರಮಕೈಗೊಳ್ಳಲು ಸೂಚನೆ ನೀಡಿದರು.

**ಇ–ಆಫೀಸ್;** ಕಂದಾಯ ಇಲಾಖೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿ, ಉಪವಿಭಾಗಾಧಿಕಾರಿಗಳ ಕಚೇರಿ, ತಾಲ್ಲೂಕು ಕಚೇರಿ ಸೇರಿದಂತೆ ಎಲ್ಲಾ ಹಂತದಲ್ಲಿ ಆಡಳಿತವನ್ನು ಇ–ಕಚೇರಿ ಮೂಲಕವೇ ನಿರ್ವಹಣೆ ಮಾಡಲಾಗುತ್ತಿದೆ. ಜೂನ್ 13 ರವರೆಗೆ 225952 ಅರ್ಜಿಗಳನ್ನು ಸ್ವೀಕರಿಸಿ 220847 ಅರ್ಜಿಗಳನ್ನು ಕ್ರಮಕ್ಕಾಗಿ ಕಳುಹಿಸಿದ್ದು 16428 ಕಳುಹಿಸಲು ಬಾಕಿ ಮತ್ತು 63399 ಅರ್ಜಿಗಳನ್ನು ಇತ್ಯರ್ಥ ಮಾಡಲಾಗಿದೆ. ಕಡತಗಳಲ್ಲಿ 25391 ಕಡತ ತೆರೆಯಲಾಗಿದ್ದು ಒಟ್ಟು 74709 ಸ್ವೀಕರಿಸಿ ಮುಂದಿನಹಂತಕ್ಕೆಕಳುಹಿಸಲಾಗಿದೆ.ಇದರಲ್ಲಿ 9621 ಬಾಕಿ, 12643 ಇತ್ಯರ್ಥ ಮಾಡಿದ್ದು 2062 ಪ್ರಗತಿಯ ಹಂತದಲ್ಲಿವೆ.

**ಕೆರೆಗಳ ಒತ್ತುವರಿ ತೆರವು;** ಜಿಲ್ಲೆಯಲ್ಲಿ 538 ಕೆರೆಗಳಿದ್ದು 23292 ಎಕರೆ ಪ್ರದೇಶ ವಿಸ್ತೀರ್ಣ ಹೊಂದಿರುತ್ತದೆ. ಇದರಲ್ಲಿ 486 ಕೆರೆಗಳ ಅಳತೆ ಮಾಡಿ 16604.22 ಎಕರೆ ವಿಸ್ತೀರ್ಣ ಗುರುತಿಸಲಾಗಿದೆ. ಅಳತೆ ಮಾಡಲು 52 ಕೆರೆಗಳಿಂದ 6687.24 ಎಕರೆ ಅಳತೆಗೆ ಬಾಕಿ ಇರುತ್ತದೆ. ಅಳತೆ ಮಾಡಿದ 283 ಕರೆಗಳಲ್ಲಿ 1816.39 ಎಕರೆ ಒತ್ತುವರಿ ಪ್ರದೇಶವೆಂದು ಗುರುತಿಸಿ 37 ಕೆರೆಗಳ 66.38 ಎಕರೆ ವಿಸ್ತೀರ್ಣ ತೆರವು ಮಾಡಲಾಗಿದೆ. ಇನ್ನೂ 246 ಕೆರೆಗಳ 1750 ಎಕರೆ ವಿಸ್ತೀರ್ಣ ತೆರವಿಗೆ ಬಾಕಿ ಇದ್ದು 203 ಕೆರೆಗಳು 14787 ಎಕರೆ ವಿಸ್ತೀರ್ಣದಲ್ಲಿದ್ದು ಯಾವುದೇ ಒತ್ತುವರಿಯಾಗಿರುವುದಿಲ್ಲ. ಒತ್ತುವರಿಯಾದ ಕೆರೆಗಳನ್ನು ಶೀಘ್ರದಲ್ಲಿ ತೆರವು ಮಾಡಲು ಕ್ರಮ ಕೈಗೊಳ್ಳಲು ಸೂಚನೆ ನೀಡಿದರು.

538 ಕೆರೆಗಳಲ್ಲಿ 212 ಪಂಚಾಯತ್ ರಾಜ್ ವಿಭಾಗ, 82 ಸಣ್ಣ ನೀರಾವರಿ, 36 ಜಲಸಂಪನ್ಮೂಲ ಇಲಾಖೆ, 2 ಮಹಾನಗರ ಪಾಲಿಕೆ, 144 ಗ್ರಾಮ ಪಂಚಾಯತ್ ಕೆರೆ, 28 ಅರಣ್ಯ, ಕೆಪಿಸಿಎಲ್ 2, ಎಸ್.ಎಸ್. ಎಲ್.ಆರ್.2 ಹಾಗೂ ಇತರೆ 30 ಸೇರಿವೆ.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಉಪವಿಭಾಗಾಧಿಕಾರಿ ದುರ್ಗಶ್ರೀ, ಅಭಿಷೇಕ್, ಆಯಾ ತಾಲ್ಲೂಕಿನ ತಹಶೀಲ್ದಾರರು, ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಸ್ವಾಮೀಜಿ ಪುರುಷೋತ್ತಮಾನಂದರ ಪುಣ್ಯಸ್ಮರಣೆ

» ಚಳ್ಳಕೆರೆ

ಕಳೆದ ನೂರಾರು ವರ್ಷಗಳಿಂದ ಧಾರ್ಮಿಕ ಜಾಗೃತಿಯನ್ನು ಮೂಡಿಸುವ ಮೂಲಕ ಸಮಾಜದ ಎಲ್ಲಾ ವರ್ಗದ ಜನರಲ್ಲಿ ವಿಶ್ವಾಸವನ್ನು ತುಂಬುವ ಕಾರ್ಯ ನಡೆಯುತ್ತಿದೆ. ಧಾರ್ಮಿಕ ಕಾರ್ಯಗಳಿಂದ ಮಾತ್ರ ನಮ್ಮೆಲ್ಲರ ಬದುಕು ಸಾರ್ಥಕತೆಯತ್ತ ನಡೆಯುತ್ತದೆ. ಇಂತಹ ಧಾರ್ಮಿಕ ವಿಚಾರಧಾರಗಳನ್ನು ಜನಸಾಮಾನ್ಯರಿಗೆ ನೀಡಿದ ಸ್ವಾಮಿ ಪುರುಷೋತ್ತಮಾನಂದರು ಸದಾಸ್ಮರಣೀಯರು ಎಂದು ಶಾರದಾಶ್ರಮದ ಮಾತಾಜಿತ್ಯಾಗಮಯಿ ತಿಳಿಸಿದರು.



ಅವರು, ಇಲ್ಲಿನ ವಾಸವಿ ಕಾಲೋನಿಯ ಶಾರದಾಶ್ರಮದಲ್ಲಿ ಪುರುಷೋತ್ತಮಾನಂದ ಸ್ವಾಮೀಜಿಯವರ ಸ್ಮರಣಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಆಶ್ರಮದ ಭಕ್ತವೃಂದ ಈ ಕಾರ್ಯಕ್ರಮವನ್ನು ಹಮ್ಮಿಕೊಂಡಿತ್ತು. ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಎಲ್ಲಾ ಸದ್ಭಕ್ತರಿಗೆ ಮಾರ್ಗದರ್ಶನ ನೀಡಿದ ಮಾತಾಜಿತ್ಯಾಗಮಯಿ, ಪುರುಷೋತ್ತಮಾನಂದ ಸ್ಮರಣಾ ಕಾರ್ಯಕ್ರಮ ನಮ್ಮೆಲ್ಲರಿಗೂ ಪ್ರೇರಕ ಶಕ್ತಿಯಾಗಿದೆ. ಇಂತಹ ಮಹಾನ್ ಶ್ರೇಷ್ಠರ ಧಾರ್ಮಿಕ ವಿಚಾರಧಾರೆಗಳನ್ನು ನಾವೆಲ್ಲರೂ ಪರಸ್ಪರ ಹಂಚಿಕೊಳ್ಳುವುದೇ ಪುಣ್ಯಕಾರ್ಯ ಎಂದು ಭಾವಿಸುವೆ ಎಂದರು.

ಉಪನ್ಯಾಸ ನೀಡಿದ ಮಠದ ಸದ್ಭಕ್ತೆ ವೀಣಾಮಂಜುನಾಥ, ಪುರುಷೋತ್ತಮ 'ಾನಂದಸ್ವಾಮೀಜಿಯವರು ಬೆಂಗಳೂರು ಪೊನ್ನಂಪೇಟೆ ಹಾಗೂ ಬೆಳಗಾವಿ ರಾಮಕೃಷ್ಣ ಆಶ್ರಮದ ಮಿಷನ್ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದರು. ವಿಶೇಷವಾಗಿ ಗ್ರಾಮಾಂತರ ಪ್ರದೇಶದಲ್ಲಿ ಹೆಚ್ಚು ಧಾರ್ಮಿಕ ಕಾರ್ಯಕ್ರಮ ಹಮ್ಮಿಕೊಳ್ಳುವ ಮೂಲಕ ಗ್ರಾಮೀಣ ಭಾಗದ ಜನರಲ್ಲೂ ಜಾಗೃತಿ ಮೂಡಿಸಿದರು. ಅವರ ಪುಣ್ಯಸ್ಮರಣೆ ನಮ್ಮೆಲ್ಲರಿಗೂ ಆತ್ಮಸ್ಥೈರ್ಯ ತುಂಬಲಿದೆ ಎಂಬುವುದು ನನ್ನ ಭಾವನೆ.

# ಪರಶುರಾಮಪುರ ತಾಲ್ಲೂಕು ಕೇಂದ್ರವಾಗಿಸಲು ಶಾಸಕ ಟಿ.ರಘುಮೂರ್ತಿ ಹೋರಾಟ ನಡೆಸಿದರೆ ನಾನು ಕೈಜೋಡಿಸುವೆ: ಗೋವಿಂದಕಾರಜೋಳ

» ಚಳ್ಳಕೆರೆ

ನಗರದ ಛೇಂಬರ್ ಆಫ್ ಕಾಮರ್ಸ್ ಸಭಾಂಗಣದಲ್ಲಿ ಶನಿವಾರ ನಡೆದ ನೂತನ ಸಂಸದ ಗೋವಿಂದ ಎಂ.ಕಾರಜೋಳ ಅಭಿನಂದನೆ ಸ್ವೀಕರಿಸಿ ಮಾತನಾಡುವ ಸಂದರ್ಭದಲ್ಲಿ ಕ್ಷೇತ್ರದ ಶಾಸಕರಿಗೆ ಮೂರು ಪ್ರಮುಖ ವಿಷಯಗಳನ್ನು ಪ್ರಸ್ತಾಪಿಸಿ ರಾಜ್ಯದಲ್ಲಿ ತಮ್ಮ ಸರ್ಕಾರ ಆಡಳಿತದಲ್ಲಿದ್ದು, ಸಾರ್ವಜನಿಕ ಹಿತದೃಷ್ಟಿಯಿಂದ ಬೇಡಿಕೆಗಳನ್ನು ಈಡೇರಿಸುವಲ್ಲಿ ಯಶಸ್ವಿಯಾಗಬೇಕೆಂದು ಬಯಸುತ್ತೇನೆ.

ಪ್ರಮುಖವಾಗಿ ಚಿತ್ರದುರ್ಗ ಜಿಲ್ಲೆಯಲ್ಲಿ ಇತ್ತೀಚಿನ ವರ್ಷಗಳಲ್ಲಿ ಹ್ಯಾಟ್ರಿಕ್ ಸಾಧನೆಗೈದ ಜಿಲ್ಲೆಯ ಏಕೈಕ ಕಾಂಗ್ರೆಸ್ ಪಕ್ಷದ ಶಾಸಕರು ತಾವಾಗಿದ್ದೀರಿ, ತಾವು ಈ ಹಿಂದೆ 2013–18ರ ಅವಧಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಆಡಳಿತದಲ್ಲೇ ಪರಶುರಾಮಪುರ ಆಡಳಿತವನ್ನು ತಾಲ್ಲೂಕು ಕೇಂದ್ರವಾಗಿ ಮಾಡುವ ಭರವಸೆ ನೀಡಿದ್ದೀರಿ, ಅಂದು ಸರ್ಕಾರವಿದ್ದರೂ ಮಾಡಲು ಸಾಧ್ಯವಾಗಿಲ್ಲ. ಆದರೆ, ಈಗ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಆಡಳಿತದಲ್ಲಿದ್ದು, ಈ ಬೇಡಿಕೆಯನ್ನು ಈಡೇರಿಸಬೇಕು ಎಂದರು. ಈ ಹಿಂದೆ ಈ ಕ್ಷೇತ್ರದ ಸಚಿವರಾಗಿದ್ದ ತಿಪ್ಪೇಸ್ವಾಮಿ ಅವಧಿಯಲ್ಲಿ ಅಂದಿನ ಮಾಜಿ ಮುಖ್ಯಮಂತ್ರಿ ಜಗದೀಶಶೆಟ್ಟರ್ ವಿವಿ ಸಾಗರದಿಂದ ಚಳ್ಳಕೆರೆಗೆ ಕುಡಿಯುವ ನೀರು ಯೋಜನೆಗೆ 30 ಕೋಟಿ ಹಣ ಬಿಡುಗಡೆಗೊಳಿಸಿದ್ದರು. ಕ್ಷೇತ್ರದ ಅಭಿವೃದ್ದಿಗಾಗಿ ಮಾಜಿ ಸಚಿವ ತಿಪ್ಪೇಸ್ವಾಮಿಯವರ ಕೊಡುಗೆಯ ಬಗ್ಗೆ ಹೆಚ್ಚು ಗಮನಹರಿಸಬೇಕು, ಅಂದು ತಿಪ್ಪೇಸ್ವಾಮಿಯವರು ಈ ಕ್ಷೇತ್ರದಲ್ಲಿ ಐದು ಸಾವಿರ ನಿವೇಶನ ನೀಡುವ ಭರವಸೆ ನೀಡಿದ್ದು, ತಾವು ಸಹ ನಿವೇಶನ ಜೊತೆಗೆ ಮನೆ ನಿರ್ಮಿಸುವ ಇಚ್ಛಾಶಕ್ತಿಯನ್ನು ಹೊಂದಿ ಕಾರ್ಯಗತಗೊಳಿಸಬೇಕು ಎಂದರು.




Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T